ಕನ್ನಡ ದಿನಪತ್ರಿಕೆ
20 ಫೆಬ್ರುವರಿ । ಮಂಗಳವಾರ
20 February 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನ್ನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 03 ಪುಟ – 4 | RNI.KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಜನಸ್ಪಂದನ 2.0: 11 ದಿನದಲ್ಲಿ 4,321 ಅರ್ಜಿ ಯಶಸ್ವೀ ವಿಲೇವಾರಿ: ಸಿಎಂ ಅಪರ ಮುಖ್ಯ ಕಾರ್ಯದರ್ಶಿ ಅತೀಕ್



ಬೆಂಗಳೂರು: ಇತ್ತೀಚೆಗೆ ವಿಧಾನಸೌಧ ಮುಂಭಾಗ ನಡೆದ ಮುಖ್ಯಮಂತ್ರಿಯವರ ಜನಸ್ಪಂದನ ಕಾರ್ಯಕ್ರಮವು ನಿರೀಕ್ಷೆಗೂ ಮೀರಿ ಯಶಸ್ವಿಯಾಗಿದ್ದು, ಸ್ವೀಕರಿಸಿದ ಅರ್ಜಿಗಳ ಸಕಾರಾತ್ಮಕ ವಿಲೇವಾರಿಗೆ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ ಅತೀಕ್ ಸೂಚಿಸಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಜನಸ್ಪಂದನ ಕಾರ್ಯಕ್ರಮದ ಪರಾಮರ್ಶೆಗಾಗಿ, ಆಯೋಜನೆಯಲ್ಲಿ ಭಾಗಿಯಾದ ಅಧಿಕಾರಿಗಳ ಸಭೆ ನಡೆಸಿ ಈ ಸೂಚನೆ ನೀಡಿದರು. ಜನಸ್ಪಂದನ ಕಾರ್ಯಕ್ರಮದ ಯಶಸ್ಸಿನ ಕುರಿತು ಮುಖ್ಯಮಂತ್ರಿಯವರೂ ಮೆಚ್ಚುಗೆ ವ್ಯಕ್ತಪಡಿಸಿದ್ದು, ಅವರು ಇದಕ್ಕೆ ಸಾಂಸ್ಥಿಕ ರೂಪ ನೀಡಿ ಇನ್ನಷ್ಟು ವ್ಯವಸ್ಥಿತವಾಗಿ ಕಾರ್ಯಕ್ರಮ ನಡೆಸಬೇಕೆಂದು ಅಪೇಕ್ಷಿಸಿದ್ದಾರೆ ಎಂದರು.

**ವಿಭಾಗ ಮಟ್ಟದಲ್ಲಿ ಜನಸ್ಪಂದನ**

ಜನಸ್ಪಂದನ ಕಾರ್ಯಕ್ರಮವನ್ನು ವಿಭಾಗ ಮಟ್ಟದಲ್ಲಿ ನಡೆಸುವ ಕುರಿತೂ ಸಹ ಚಿಂತನೆ ನಡೆದಿದೆ. ಮೊದಲಿಗೆ ಕಲಬುರ್ಗಿಯಲ್ಲಿ ವಿಭಾಗಮಟ್ಟದ ಜನಸ್ಪಂದನ ನಡೆಸಲು ಉದ್ದೇಶಿಸಿದೆ. ವಿಭಾಗ ಮಟ್ಟದಲ್ಲಿ ಸಂಬಂಧಿಸಿದ ಜಿಲ್ಲಾಧಿಕಾರಿಗಳು ಖುದ್ದು ಭಾಗವಹಿಸಲು ಸೂಚಿಸಲಾಗುವುದು ಎಂದು ತಿಳಿಸಿದರು.

**11 ದಿನದಲ್ಲಿ 4321 ಅರ್ಜಿ ವಿಲೇವಾರಿ**

ಮೊನ್ನೆ ಸ್ವೀಕರಿಸಲಾದ 14,685 ಅರ್ಜಿಗಳ ಪೈಕಿ 4321 ಅರ್ಜಿಗಳನ್ನು ಈಗಾಗಲೇ ವಿಲೇವಾರಿ ಮಾಡಲಾಗಿದೆ. ಬಾಕಿ ಉಳಿದ ಅರ್ಜಿಗಳನ್ನೂ ಶೀಘ್ರವೇ ವಿಲೇವಾರಿ ಮಾಡುವಂತೆ ಸೂಚಿಸಿದರು.ಮುಂದಿನ ಜನಸ್ಪಂದನ ಕಾರ್ಯಕ್ರಮಗಳನ್ನು ಇನ್ನಷ್ಟು ವ್ಯವಸ್ಥಿತವಾಗಿ ಆಯೋಜಿಸುವಂತೆ ಹಾಗೂ ಸಾರ್ವಜನಿಕ ಕುಂದುಕೊರತೆ ನಿವಾರಣೆಯ ಈ ಕಾರ್ಯಕ್ರಮಗಳು ದೇಶಕ್ಕೇ ಮಾದರಿಯಾಗುವಂತೆ ನಡೆಯಬೇಕು ಎಂದು ಅವರು ತಿಳಿಸಿದರು.

**ಸಿಎಂ ಸಿದ್ದರಾಮಯ್ಯ ಜನಸ್ಪಂದನ ಕಾರ್ಯಕ್ರಮ**

ಜನಸ್ಪಂದನ: ವೈದ್ಯಕೀಯ ಚಿಕಿತ್ಸೆ, ಸಣ್ಣಪುಟ್ಟ ವ್ಯಾಪಾರ ಮಾಡಲು ಹಣಕ್ಕೆ ಅನೇಕರಿಂದ ಮನವಿ ಜನಸ್ಪಂದನದಲ್ಲಿ ತಮ್ಮ ಅಹವಾಲುಗಳೊಂದಿಗೆ ಆಗಮಿಸುವ ಜನರ ಕುರಿತು ಕಾಳಜಿ ವಹಿಸಬೇಕು. ಅವರ ನೋವಿಗೆ ಅಧಿಕಾರಿಗಳು ಸ್ಪಂದಿಸುತ್ತಿದ್ದಾರೆಂಬ ಸಂತೃಪ್ತಿ ಅವರಲ್ಲಿ ಮೂಡಬೇಕು. ನಿಯಮಾನುಸಾರ ಅನುಷ್ಠಾನಗೊಳಿಸಲು ಸಾಧ್ಯವಿಲ್ಲದ ಅಹವಾಲುಗಳಿಗೆ ಸ್ಪಷ್ಟ ಹಿಂಬರಹ ನೀಡಬೇಕು. ಮನವಿದಾರರು ಪದೇ ಪದೇ ಜನಸ್ಪಂದನ ಕಾರ್ಯಕ್ರಮಕ್ಕೆ ಅದೇ ಅಹವಾಲಿನೊಂದಿಗೆ ಆಗಮಿಸುವಂತಾಗಬಾರದು ಎಂದು ಎಚ್ಚರಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯಮಂತ್ರಿಯವರ ಕಾರ್ಯದರ್ಶಿ ಡಾ.ಕೆ.ವಿ ತ್ರಿಲೋಕಚಂದ್ರ ಅವರು, ಜನಸ್ಪಂದನ ಕಾರ್ಯಕ್ರಮವನ್ನು ಮುಂದಿನ ಬಾರಿ ಇನ್ನಷ್ಟು ವ್ಯವಸ್ಥಿತವಾಗಿ ಆಯೋಜಿಸುವ ನಿಟ್ಟಿನಲ್ಲಿ ಇಂದಿನ ಸಭೆಯ ಚರ್ಚೆಯ ಅಂಶಗಳನ್ನು ಅಳವಡಿಸಿಕೊಳ್ಳುವಂತೆ ಸೂಚಿಸಿದರು. ಈ ಸಭೆಯಲ್ಲಿ ಇ-ಆಡಳಿತ ಇಲಾಖೆಯ ಕಾರ್ಯದರ್ಶಿ ಉಜ್ವಲ್ ಕುಮಾರ್ ಘೋಷ್ ಮತ್ತು ಇತರ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

## ಬೆಳಗಾವಿ ಪಾಲಿಕೆಯಲ್ಲಿದ್ದ ನಾಲ್ಕು ಲ್ಯಾಪ್‌ಟಾಪ್ ಎಗರಿಸಿದ ಕಳ್ಳರು



ಬೆಳಗಾವಿ: ಬೆಳಗಾವಿಯ ಬಸವೇಶ್ವರ ವೃತ್ತದ ಬಳಿ ಇರುವ ಬೆಳಗಾವಿ ಮಹಾನಗರ ಪಾಲಿಕೆಯ ದಕ್ಷಿಣ ವಲಯದ ಕಂದಾಯ ಶಾಖೆಯಲ್ಲಿ ಕಳ್ಳತನ ನಡೆದಿರುವ ಘಟನೆ ಬೆಳಕಿಗೆ ಬಂದಿದೆ.

ಪಾಲಿಕೆಯ ಕಚೇರಿಯ ಬಾಗಿಲು ಮುರಿದು ಒಳಗೆ ನುಗ್ಗಿದ ಕಳ್ಳರು ಲ್ಯಾಪ್‌ಟಾಪ್ ಎಗರಿಸಿ ಪರಾರಿಯಾಗಿದ್ದಾರೆ. ಆಸ್ತಿ ಮಾಲೀಕತ್ವದ ದಾಖಲಾತಿ, ಆಸ್ತಿ ಮಾಲೀಕರ ಗುರುತಿನ ಚೀಟಿ, ತೆರಿಗೆ ಚೀಟಿ, ಕಟ್ಟಡ ಪರವಾನಗಿ ಪತ್ರ ಸೇರಿದಂತೆ ಒಟ್ಟು 26 ವಾರ್ಡ್‌ಗಳ ನಿವಾಸಿಗಳ ದಾಖಲೆಗಳ ಸಂಗ್ರಹವಿದ್ದ ನಾಲ್ಕು ಲ್ಯಾಪ್‌ಟಾಪ್ ಕಳ್ಳತನ ಮಾಡಿದ್ದಾರೆ. ಸೋಮವಾರ ಬೆಳಗ್ಗೆ ಸಿಬ್ಬಂದಿ ಕಚೇರಿಗೆ ಬಂದಾಗ ಕಳ್ಳತನವಾಗಿರುವುದು ಬೆಳಕಿಗೆ ಬಂದಿದೆ. ಈ ಕುರಿತು ಟಿಳಕವಾಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಶೀಘ್ರದಲ್ಲೇ ಸಾರಿಗೆ ಇಲಾಖೆಯಲ್ಲಿ 2 ಸಾವಿರ ಸಿಬ್ಬಂದಿ ನೇಮಕ: ಸಚಿವ ರಾಮಲಿಂಗಾರೆಡ್ಡಿ



ಬೆಳಗಾವಿ: ರಾಜ್ಯದಲ್ಲಿ ನೂತನ ಬಸ್ ಗಳ ಖರೀದಿ ಪ್ರಕ್ರಿಯೆ ಆರಂಭಿಸಲಾಗಿದ್ದು, 2 ಸಾವಿರಕ್ಕಿಂತಲೂ ಅಧಿಕ ವಾಹನ ಚಾಲಕರ ಹಾಗೂ ನಿರ್ವಾಹಕರ ಹುದ್ದೆಗಳ ಭರ್ತಿ ಪ್ರಕ್ರಿಯೆ ಕೂಡ ಚಾಲನೆಯಲ್ಲಿದೆ ಎಂದು ಸಾರಿಗೆ ಮತ್ತು ಮುಜರಾಯಿ ಇಲಾಖೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ನೂತನ ಬಸ್ಸುಗಳ ಲೋಕಾರ್ಪಣೆ ಸಮಾರಂಭದಲ್ಲಿ ಮಾತನಾಡಿದ ಅವರು, ಈ ವರ್ಷ ಸುಮಾರು 700 ಕ್ಕೂ ಅಧಿಕ ಹೊಸ ಬಸ್ ಗಳ ಖರೀದಿ ಪ್ರಕ್ರಿಯೆ ನಡೆದಿದೆ. ಸಧ್ಯದಲ್ಲೇ 2 ಸಾವಿರಕ್ಕಿಂತಲೂ ಅಧಿಕ ವಾಹನ ಚಾಲಕರ ಹಾಗೂ ನಿರ್ವಾಹಕರ ಹುದ್ದೆಗಳ ಭರ್ತಿ ಮಾಡಿಕೊಳ್ಳಲಾಗುತ್ತದೆ ಎಂದರು.

ಅಪಘಾತಗಳಲ್ಲಿ ಮೃತರಾದ ಬಸ್ ಚಾಲಕರಿಗೆ, ಕಂಡಕ್ಟರ್ ಗಳ ವಾರಸುದಾರರಿಗೆ 50 ಲಕ್ಷ ರೂಪಾಯಿ ಪರಿಹಾರ ವಿತರಣೆ ಮಾಡಲಾಗುತ್ತಿದೆ. ಪರಿಹಾರ ಧನವನ್ನು 1 ಕೋಟಿಗೆ ಹೆಚ್ಚಿಸುವಂತೆ ಈಗಾಗಲೇ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.





## ಜಿಲ್ಲಾಧಿಕಾರಿ ಸೇರಿ 8 ಅಧಿಕಾರಿಗಳ ವಿರುದ್ಧ ದೂರು ದಾಖಲು

ಚನ್ನಪಟ್ಟಣ: ಸರ್ಕಾರಿ ಜಾಗದ ಒತ್ತುವರಿ ತಡೆಯಲು ವಿಫಲ ಮತ್ತು ಸರ್ಕಾರಿ ಜಾಗದಲ್ಲಿದ್ದ ಹಳ್ಳ ಮುಚ್ಚಿರುವವರ ವಿರುದ್ಧ ಕ್ರಮ ಜರುಗಿಸಿಲ್ಲ ಎಂದು ಆರೋಪಿಸಿ ಜಿಲ್ಲಾಧಿಕಾರಿ ಸೇರಿ 8 ಅಧಿಕಾರಿಗಳ ವಿರುದ್ಧ ಲೋಕಾಯುಕ್ತದಲ್ಲಿ ದೂರು ದಾಖಲಾಗಿದೆ.

ಜಿಲ್ಲಾಧಿಕಾರಿ ಡಾ. ಅವಿನಾಶ್ ಮೆನನ್ ರಾಜೇಂದ್ರ, ಉಪ ವಿಭಾಗಾಧಿಕಾರಿ ಬಿನೋಯ್, ತಹಶೀಲ್ದಾರ್ ಮಹೇಂದ್ರ, ತಾ.ಪಂ. ಇ.ಓ. ಶಿವಕುಮಾರ್, ಭೂಮಾಪಕ ಪುಟ್ಟರಾಜು, ಉಪ ತಹಶೀಲ್ದಾರ್ ಸುನೀಲ್, ರೆವಿನ್ಯೂ ಇನ್‌ಸ್ಪೆಕ್ಟರ್ ವೀರೇಶ್, ಗ್ರಾಮ ಲೆಕ್ಕಾಧಿಕಾರಿ ವಿನೋದ್, ಗ್ರಾ.ಪಂ. ಪಿಡಿಒ ಬಸವರಾಜು ವಿರುದ್ಧ ಸಾಮಾಜಿಕ ಕಾರ್ಯಕರ್ತ ಕಂಚನಹಳ್ಳಿ ರವಿಕುಮಾರ್ ಲೋಕಾಯುಕ್ತದಲ್ಲಿ ದೂರು ನೀಡಿದ್ದಾರೆ.

## ಕಂದಕಕ್ಕೆ ಉರುಳಿ ಬಿದ್ದ ಕಾರು



ಚಿಕ್ಕಮಗಳೂರು: ಚಾಲಕನ ನಿಯಂತ್ರಣ ತಪ್ಪಿ ಕಾರೊಂದು 20 ಅಡಿ ಆಳದ ಕಂದಕಕ್ಕೆ ಬಿದ್ದಿರುವ ಘಟನೆ ಮೂಡಿಗೆರೆ ತಾಲೂಕಿನ ಚಾರ್ಮಾಡಿ ಘಾಟ್ನ ಮಲಯ ಮಾರುತದ ಬಳಿ ನಡೆದಿದೆ.

ಕಾರಿನಲ್ಲಿದ್ದ 6 ಮಂದಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಚಿತ್ರದುರ್ಗದಿಂದ ಧರ್ಮಸ್ಥಳಕ್ಕೆ ಕಾರಿನಲ್ಲಿ 6 ಪ್ರವಾಸಿಗರು ಪ್ರಯಾಣ ಮಾಡುತ್ತಿದ್ದರು. ಈ ವೇಳೆ ಕಾರು ಚಾರ್ಮಾಡಿ ಘಾಟ್ನ ಮಲಯ ಮಾರುತ ಬಳಿ ಬರುತ್ತಿದ್ದಂತೆ 20 ಅಡಿ ಆಳವಿರುವ ಕಂದಕಕ್ಕೆ ಉರುಳಿ ಬಿದ್ದಿದೆ. ಪರಿಣಾಮ ಕಾರಿನಲ್ಲಿದ್ದ ಆರು ಜನರು ಗಾಯಗೊಂಡಿದ್ದು ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

ವಾಹನಗಳು ಚಲಿಸುವ ಮಾರ್ಗದಲ್ಲಿ ತಡೆಗೋಡೆ ಇಲ್ಲದೇ ಈ ಅವಘಡ ಸಂಭವಿಸಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಇನ್ನು ಕಂದಕದಲ್ಲಿ ಕಾರು ಉಲ್ಟಾ ಬಿದ್ದಿದ್ದು ಫುಲ್ ಜಖಂ ಆಗಿದೆ. ಕಾರಿನಲ್ಲಿದ್ದ ವಸ್ತುಗಳೆಲ್ಲ ನೀರಿನಿಂದ ನೆನದು ಹೋಗಿವೆ. ಬಣಕಲ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

## ವಿಧಾನಸೌಧದಲ್ಲೇ ಶಾಸಕರಿಗೆ ಮಧ್ಯಾಹ್ನದ ಬಿಸಿಯೂಟ: ಸ್ಪೀಕರ್ ಖಾದರ್ ಘೋಷಣೆ



ಬೆಂಗಳೂರು: ವಿಧಾನಸೌಧದಲ್ಲೇ ಶಾಸಕರಿಗೆ ಮಧ್ಯಾಹ್ನದ ಬಿಸಿಯೂಟ ನೀಡಲಾಗುವುದು ಎಂದು ಸ್ಪೀಕರ್ ಖಾದರ್ ಅವರು ಸದನದಲ್ಲಿ ಘೋಷಣೆ ಮಾಡಿದ್ದಾರೆ.

ಈಗಾಗಲೇ ಬೆಳಗ್ಗೆ ತಿಂಡಿಯ ವ್ಯವಸ್ಥೆ ಮಾಡಿರುವ ಸ್ಪೀಕರ್, ಇದೀಗ ತಿಂಡಿ ಜೊತೆಗೆ ಊಟವೂ ಫ್ರೀ ಎಂದು ಹೇಳಿದ್ದಾರೆ. ಶಾಸಕರಿಗೆ ಮಧ್ಯಾಹ್ನದ ಊಟಕ್ಕೂ ವಿಧಾನಸೌಧದಲ್ಲೇ ವ್ಯವಸ್ಥೆ ಮಾಡಲಾಗುವುದು. ನೀವು ಎಲ್ಲಿ ಹೋದರೂ ಇಲ್ಲಿಗಿಂತ ಬೆಸ್ಟ್ ಊಟ ನಿಮಗೆ ಸಿಗಲ್ಲ ಎಂದು ಖಾದರ್ ಹೇಳಿದ್ದಾರೆ. ಸ್ಪೀಕರ್ ಮಾತಿಗೆ ಮಾಜಿ ಸಚಿವ ಆರಗ ಜ್ಞಾನೇಂದ್ರ ತಮಾಷೆ ಮಾಡಿದ್ದಾರೆ. ಜೊತೆಗೆ ಹಾಸಿಗೆ, ದಿಂಬು ಕೊಟ್ಟಿಡಿ, ಇಲ್ಲೇ ಸುಖವಾಗಿ ನಿದ್ದೇನೂ ಮಾಡಿಬಿಡ್ತೀವಿ ಎಂದು ಹೇಳುವ ಮೂಲಕ ಖಾದರ್ ಕಾಲೆಳೆದಿದ್ದಾರೆ.

ಊಟದ ವ್ಯವಸ್ಥೆ ಯಾಕೆ?: ಶಾಸಕರು ಸಮಯಕ್ಕೆ ಸರಿಯಾಗಿ ಬರದೇ ಮಧ್ಯಾಹ್ನದ ಕಲಾಪ ಆರಂಭ ವಿಳಂಬ ಆಗುತ್ತಿದೆ. ಈ ಹಿನ್ನೆಲೆಯಲ್ಲಿ ಸ್ಪೀಕರ್ ಈ ಘೋಷಣೆಯನ್ನು ಮಾಡಿದ್ದಾರೆ.

ಈ ಹಿಂದೆಯೂ ಶಾಸಕರು ಲೇಟಾಗಿ ಬಂದಿದ್ದಾಗ ಸ್ಪೀಕರ್ ಪ್ರಶ್ನೆ ಮಾಡಿದ್ದರು. ಈ ವೇಳೆ ಶಾಸಕರು ಬಾಲಿಶವಾದ ಉತ್ತರಗಳನ್ನು ನೀಡಿದ್ದರು. ಒಬ್ಬರು ಶರ್ಟ್ ಚೇಂಜ್ ಮಾಡಿ ಬರುವಾಗ ತಡವಾಯಿತು. ಮೀಟಿಂಗ್ ರೂಂನಲ್ಲಿ ಕಾಯ್ತಾ ಇದ್ದೆವು, ಹೀಗಾಗಿ ನಮಗೆ ಗೊತ್ತಾಗಿಲ್ಲ ಅಂತೆಲ್ಲ ಹೇಳಿದ್ದರು. ಹೀಗೆ ಶಾಸಕರು ಕಲಾಪಕ್ಕೆ ತಡವಾಗಿ ಬರುತ್ತಿರುವುದರಿಂದ ಬೇಸತ್ತು ಸ್ಪೀಕರ್ ಈ ನಿರ್ಧಾರಕ್ಕೆ ಬಂದಿದ್ದಾರೆ.

## ನಕಲಿ ಡಾಕ್ಟರೇಟ್ ಪಡೆದವರ ವಿರುದ್ಧ ಕ್ರಮ: ಸಚಿವ ಡಾ.ಎಂ.ಸಿ.ಸುಧಾಕರ್



ಬೆಂಗಳೂರು: ವಿಶ್ವವಿದ್ಯಾನಿಲಯಗಳಿಂದ ನೀಡುವ ನಕಲಿ ಗೌರವ ಡಾಕ್ಟರೇಟ್ ಪದವಿಗಳನ್ನು ಪಡೆಯುವುದರ ಬಗ್ಗೆ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಹೇಳಿದ್ದಾರೆ.

ಪ್ರಶ್ನೋತ್ತರ ಅವಧಿಯಲ್ಲಿ ಸದಸ್ಯ ಮಂಜುನಾಥ್ ಭಂಡಾರಿ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಇತ್ತೀಚೆಗೆ ವಿಶ್ವವಿದ್ಯಾನಿಲಯಗಳಲ್ಲಿ ವ್ಯಾಪಕವಾಗಿ ನಕಲಿ ಡಾಕ್ಟರೇಟ್ ಪದವಿಗಳನ್ನು ನೀಡುತ್ತಿರುವ ಬಗ್ಗೆ ದೂರುಗಳು ಬರುತ್ತಿವೆ.

ಇದನ್ನು ಗಂಭೀರವಾಗಿ ಪರಿಗಣಿಸಲಾಗುತ್ತದೆ ಎಂದು ತಿಳಿಸಿದರು. ನಕಲಿ ಗೌರವ ಡಾಕ್ಟರೇಟ್ ಕೊಡುವ ಬಗ್ಗೆ ಏನು ಕ್ರಮ ಕೈಗೊಂಡಿದ್ದೀರ ಎಂದು ಮಂಜುನಾಥ್ ಕೇಳಿದ ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಸಚಿವರು, ಡಾಕ್ಟರೇಟ್ ಪದವಿ ಪಡೆದವರು ಡಾಕ್ಟರ್ ಎಂದು ಹಾಕೊಳ್ಳಬಹುದಾ ಎಂಬುದರ ಬಗ್ಗೆ ಸುಪ್ರಿಂಕೋರ್ಟ್ ತೀರ್ಪು ಬರಲಿದೆ. ಉನ್ನತ ಶಿಕ್ಷಣ ಪರಿಷತ್ ಸಭೆ ಕರೆದು, ನಕಲಿ ಗೌರವ ಡಾಕ್ಟರೇಟ್ ಪಡೆಯುವ ಪ್ರಕರಣಗಳಿಗೆ ಕಡಿವಾಣ ಹಾಕುತ್ತೇವೆ ಎಂದು ಆಶ್ವಾಸನೆ ನೀಡಿದರು.

ಜೊತೆಗೆ ಖಾಸಗಿ ವಿಶ್ವವಿದ್ಯಾನಿಲಯಗಳ ಮುಖ್ಯಸ್ಥರ ಕರೆದು ಚರ್ಚೆ ಮಾಡುತ್ತೇವೆ. ಇಂತಹ ಪ್ರಕರಣಗಳು ಮರುಕಳಿಸಂತೆ ಸರ್ಕಾರ ಸೂಕ್ತ ಕ್ರಮ ಜರುಗಿಸಲಿದೆ ಎಂದು ಆಶ್ವಾಸನೆ ನೀಡಿದರು.

## ಬೆಳಗಾವಿ ವಿಭಾಗಕ್ಕೆ ನೂತನ 50 ಬಸಗಳ ಲೋಕಾರ್ಪಣೆ



ಬೆಳಗಾವಿ: ವಾಯುವ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಬೆಳಗಾವಿ ವಿಭಾಗಕ್ಕೆ ಅಶೋಕ ಲೇಲ್ಯಾಂಡ ನಿರ್ಮಿತ ಃಖ-ಗಿಖ ಮಾದರಿಯ 50 ಹೊಸ ಪರಿಸರ ಸ್ನೇಹಿ ಬಸಗಳನ್ನು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರು ಜನಸೇವೆಗೆ ಅರ್ಪಿಸಿದರು.

ನಗರದಲ್ಲಿ ಅಪಘಾತರಹಿತ ಚಾಲಕರಿಗೆ ಬೆಳ್ಳಿ ಪದಕ ವಿತರಿಸಿ ಮಾತನಾಡಿದ ಅವರು, ಈ ಹೊಸ ಬಸ್‌ಗಳನ್ನು ಪ್ರಾರಂಭಿಸಿರುವುದು ಬೆಳಗಾವಿಯಲ್ಲಿ ಸಾರ್ವಜನಿಕ ಸಾರಿಗೆಗೆ ಸಕಾರಾತ್ಮಕ ಬೆಳವಣಿಗೆಯಾಗಿದೆ. ಹೊಸ ಬಸ್‌ಗಳು ಪ್ರಯಾಣಿಕರಿಗೆ ಹೆಚ್ಚು ಆರಾಮದಾಯಕ ಮತ್ತು ಸುರಕ್ಷಿತ ಪ್ರಯಾಣದ ಅನುಭವವನ್ನು ಒದಗಿಸುತ್ತವಲ್ಲದೆ ವಾಯು ಮಾಲಿನ್ಯವನ್ನು ಕಡಿಮೆ ಮಾಡಲು ಸಹಕರಿಸುತ್ತವೆ ಎಂದರು. 2 ಸಾವಿರಕ್ಕಿಂತಲೂ ಅಧಿಕ ವಾಹನ ಚಾಲಕರ ಹಾಗೂ ನಿರ್ವಾಹಕರ ಹುದ್ದೆಗಳ ಭರ್ತಿ ಪ್ರಕ್ರಿಯೆ ಕೂಡ ಚಾಲನೆಯಲ್ಲಿದೆ. ಅಪಘಾತಗಳಲ್ಲಿ ಮೃತರಾದ ಬಸ್ ಚಾಲಕರಿಗೆ, ಕಂಡಕ್ಟರಗಳ ವಾರಸುದಾರರಿಗೆ 50 ಲಕ್ಷ ರೂಪಾಯಿ ಪರಿಹಾರ ವಿತರಣೆ ಮಾಡಲಾಗುತ್ತಿದೆ. ಪರಿಹಾರ ಧನವನ್ನು 1 ಕೋಟಿಗೆ ಹೆಚ್ಚಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಅವರು ತಿಳಿಸಿದರು. ಅಪಘಾತ ರಹಿತ 5 ವರ್ಷಗಳ ವಾಹನ ಚಾಲನೆ ಮಾಡಿದ 38 ಬಸ್ ಚಾಲಕರಿಗೆ ಬೆಳ್ಳಿ ಪದಕ, ಪ್ರಶಸ್ತಿ ಪತ್ರ ನೀಡಿ, ಸನ್ಮಾನಿದರು. ಸಚಿವೆ ಲಕ್ಷ್ಮೀ ಹೆಬ್ಬಾಳಕರ, ಶಾಸಕರಾದ ಭರಮಗೌಡ (ರಾಜು) ಕಾಗೆ, ಆಸೀಫ್ (ರಾಜು) ಸೇಠ್ ಮಾತನಾಡಿದರು. ಎನ್ ಡಬ್ಲ್ಯು ಕೆಆರ್ ಟಿಸಿ ಕಚೇರಿಯ ವ್ಯವಸ್ಥಾಪಕ ನಿರ್ದೇಶಕ ಭರತ.ಎಸ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಸರ್ಕಾರಿ ಮುಖ್ಯ ಸಚೇತಕರು ಅಶೋಕ ಪಟ್ಟಣ, ಶಾಸಕ ಬಾಬಾಸಾಹೇಬ್ ಪಾಟೀಲ, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, ವಾ.ಕ.ರ.ಸಾ ಸಂಸ್ಥೆಯ ಬೆಳಗಾವಿ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿ ಗಣೇಶ ರಾಥೋಡ ಉಪಸ್ಥಿತರಿದ್ದರು.

## ಧೈರ್ಯವಾಗಿ ಪ್ರಶ್ನಿಸಿ ಎಂದಿದ್ದರಲ್ಲಿ ತಪ್ಪಿಲ್ಲ: ಕುವೆಂಪು ಬರಹ ಬದಲಿಕೆಗೆ ಸರ್ಕಾರ ಸಮರ್ಥನೆ



ಬೆಂಗಳೂರು: ವಸತಿ ಶಾಲೆಗಳಲ್ಲಿ ಘೋಷವಾಕ್ಯ ಬದಲಾವಣೆ ವಿಚಾರ ಭಾರೀ ಚರ್ಚೆಗೆ ಗ್ರಾಸವಾಗಿರುವ ಬೆನ್ನಲ್ಲೇ ಸರ್ಕಾರ ಈ ಬಗ್ಗೆ ಸಮರ್ಥನೆ ನೀಡಿದೆ.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿರುವ ಸಚಿವ ಪ್ರಿಯಾಂಕ್ ಖರ್ಗೆ ಅವರು, ಸಾಮಾಜಿಕ ಸ್ಥಿತಿಗಳ ತಕ್ಕಂತೆ ಬದಲಾವಣೆ ಆಗಬೇಕು. ಧೈರ್ಯವಾಗಿ ಪ್ರಶ್ನಿಸಿ ಎಂದಿದ್ದರಲ್ಲಿ ತಪ್ಪಿಲ್ಲ ಎಂದು ಸಮರ್ಥಿಸಿಕೊಂಡಿದ್ದಾರೆ.

ಕುತೂಹಲ ಇಲ್ಲ ಅಂದರೆ ಕಲಿಕೆ ಬರಲ್ಲ. ಕಲಿಕೆಯೇ ಬರಲಿಲ್ಲ ಎಂದರೆ ಜ್ಞಾನ ಬರಲ್ಲ. ಸಮಾಜದಲ್ಲಿ ಪ್ರಬುದ್ಧತೆ ಇರಲ್ಲ. ಪ್ರಬುದ್ಧ ಭಾರತ, ಪ್ರಬುದ್ಧ ಸಮಾಜ ಕಟ್ಟಬೇಕು ಎಂದು ಅಂಬೇಡ್ಕರ್ ಹೇಳಿದ್ದಾರೆ.

ಅದು ಬೆಳೆಯಬೇಕು ಎಂದರೆ ಪ್ರಶ್ನೆ ಮಾಡಲೇಬೇಕು ಅಲ್ಲವೇ ಎಂದು ಪ್ರಶ್ನಿಸಿದರು.

ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಯಬೇಕು. ಅದಕ್ಕೆ ಪ್ರಶ್ನೆ ಕೇಳುವುದು ಮುಖ್ಯ. ಎಲ್ಲದಕ್ಕೂ ಉತ್ತರ ಸಿಗುವುದಿಲ್ಲ. ಪ್ರಶ್ನೆ ಮಾಡಿದರೆ ವೈಜ್ಞಾನಿಕ ಮನೋಭಾವ ಬೆಳೆಯುತ್ತೆ. ಶಿಕ್ಷಕರಿಗೆ ಹೊಸ ರೂಪದಲ್ಲಿ ಕಲಿಕೆ ಆಗುತ್ತದೆ ಎಂದು ಹೇಳಿದರು.

ಇದೇ ವೇಳೆ ಹಿಂದೂ ಪರ ಸಂಘಟನೆಗಳು ಟೀಕೆ ವಿಚಾರಕ್ಕೆ ಪ್ರತಿಕ್ರಿಯಿಸಿ, ನಾವೇನು ಬೇರೆ ವಿಚಾರ ಹೇಳಿಲ್ಲ. ಜ್ಞಾನಕ್ಕೆ ನಾವು ತಲೆಬಾಗಲೇಬೇಕು. ಗ್ರಂಥಾಲಯಗಳಿಗೆ ಅರಿವು ಕೇಂದ್ರ ಎಂದು ಬದಲಾವಣೆ ಮಾಡಿದ್ದೇವೆ. ಅರಿವೇ ಗುರು ಎಂದು ಬಸವಣ್ಣ ಹೇಳಿದ್ದಾರೆ. ಇದು ತಪ್ಪಾ?. ಅರಿವು ಮೂಡಿಸಲು ಏನು ಮಾಡಬೇಕು ಅದನ್ನು ಸರ್ಕಾರ ಮಾಡುತ್ತಿದೆ ಎಂದು ತಿಳಿಸಿದರು.

ಏನಿದು ವಿವಾದ?

ರಾಜ್ಯದ ಹಲವು ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರವೇಶ ದ್ವಾರದಲ್ಲಿ ಕುವೆಂಪು ಅವರ 'ಜ್ಞಾನ ದೇಗುಲವಿದು ಕೈಮುಗಿದು ಒಳಗೆ ಬಾ' ಎಂಬ ಸಾಲುಗಳ ಬದಲಾಗಿ 'ಜ್ಞಾನ ದೇಗುಲವಿದು ಧೈರ್ಯವಾಗಿ ಪ್ರಶ್ನಿಸಿ' ಎಂದು ಬದಲಾಯಿಸಿ ಶಾಲೆಯ ಪ್ರವೇಶ ದ್ವಾರದಲ್ಲಿ ಬರೆಯಲಾಗಿದೆ. ಇದು ಸದ್ಯ ಭಾರೀ ಚರ್ಚೆಗೆ ಗ್ರಾಸವಾಗಿದೆ. ಸದ್ಯ ಭಾರೀ ವಿರೋಧ ವ್ಯಕ್ತವಾಗುತ್ತಿದ್ದಂತೆಯೇ ಬರಹವನ್ನು ಮತ್ತೆ ಬದಲಾವಣೆ ಮಾಡಲಾಗುತ್ತಿದೆ.

## ಹೆದ್ದಾರಿಯಲ್ಲಿ ನಿಂತು ಹಣ ವಸೂಲಿ ಮಾಡಿದ 40 ಸಂಚಾರಿ ಪೊಲೀಸರು ಒಟ್ಟಿಗೆ ಎತ್ತಂಗಡಿ



ಮುಂಬೈ: ಹೆದ್ದಾರಿಯಲ್ಲಿ ನಿಂತು ಹಣ ವಸೂಲಿ ಮಾಡಿದ 40 ಸಂಚಾರಿ ಪೊಲೀಸರು ಒಟ್ಟಿಗೆ ಎತ್ತಂಗಡಿ ಮಾಡಿರುವ ಘಟನೆ ಮುಂಬೈನಲ್ಲಿ ಬೆಳಕಿಗೆ ಬಂದಿದೆ.

ಸಾಮಾಜಿಕ ಜಾಲತಾಣ ಹೆಚ್ಚು ಬಳಕೆಗೆ ಬಂದಾಗಿನಿಂದ ಸರ್ಕಾರಿ ಅಧಿಕಾರಿಗಳ ಮುಖವಾಡ ವಿಡಿಯೋಗಳಲ್ಲಿ ಕಳಚಿ ಬೀಳುತ್ತಿದೆ. ಅದರಲ್ಲೂ ಕೆಲ ಸಂಚಾರಿ ಪೊಲೀಸರ ಲಂಚಾವತಾರ ಬಟಾಬಯಲಾಗುತ್ತಿದೆ. ಉನ್ನತ ಅಧಿಕಾರಿಗಳು ಸೇರಿದಂತೆ ಒಟ್ಟಿಗೆ 40 ಸಿಬ್ಬಂದಿಯನ್ನು ವರ್ಗಾವಣೆ ಮಾಡಲಾಗಿದೆ.

ವರ್ಗಾವಣೆಯಾದ ಎಲ್ಲ ಸಿಬ್ಬಂದಿಯೂ ಥಾಣೆಯ ಮುಂಬ್ರಾ ವಿಭಾಗದ ಸಂಚಾರಿ ಪೊಲೀಸರೆಂದು ಅಧಿಕಾರಿಗಳು ತಿಳಿಸಿದ್ದಾರೆ. ಕಾನ್ಸ್ಟೇಬಲ್ಸ್ ಹೊರತುಪಡಿಸಿ, ಹಿರಿಯ ಅಧಿಕಾರಿ ಸುರೇಶ್ ಖೆಡೆಕರ್ ಹಾಗೂ ಇಬ್ಬರು ಸಹಾಯಕ ಸಬ್ ಇನ್ಸ್ಪೆಕ್ಟರ್ ಕೂಡ ಪಟ್ಟಿಯಲ್ಲಿ ಸೇರಿದ್ದಾರೆ.

ಥಾಣೆಯ ಡೆಪ್ಯುಟಿ ಕಮಿಷನರ್ ಆಫ್ ಪೊಲೀಸ್ (ಸಂಚಾರಿ) ವಿಜಯ್ಕುಮಾರ್ ರಾಥೋಡ್ ಶನಿವಾರ ವರ್ಗಾವಣೆ ಆದೇಶಗಳನ್ನು ಹೊರಡಿಸಿದ್ದು, ಎಲ್ಲ 40 ಸಿಬ್ಬಂದಿಯನ್ನು ಕಂಟ್ರೋಲ್ ರೂಮ್ಗೆ ಸ್ಥಳಾಂತರ ಮಾಡಲಾಗಿದೆ.

ವಿಡಿಯೋದಲ್ಲಿ ಏನಿದೆ? ಮುಂಬೈನ ಬಹು ಮುಖ್ಯ ಮಾರ್ಗವಾಗಿರುವ ಮುಂಬ್ರಾ ಹೆದ್ದಾರಿಯಲ್ಲಿ ಭಾರಿ ಗಾತ್ರದ ವಾಹನಗಳ ಚಾಲಕರಿಂದ ಹಣ ವಸೂಲಿ ಮಾಡುತ್ತಿರುವ ದೃಶ್ಯ ವೈರಲ್ ಆಗಿರುವ ವಿಡಿಯೋದಲ್ಲಿದೆ.

ಸಾಮಾಜಿಕ ಜಾಲತಾಣದಲ್ಲಿ ಈ ವಿಡಿಯೋಗೆ ಭಾರಿ ಆಕ್ರೋಶ ವ್ಯಕ್ತವಾಗಿತ್ತು. ನೆಟ್ಟಿಗರು ಭ್ರಷ್ಟ ಪೊಲೀಸರನ್ನು ಹಿಗ್ಗಾಮುಗ್ಗಾ ತರಾಟೆಗೆ ತೆಗೆದುಕೊಂಡಿದ್ದರು. ಈ ಹಿನ್ನೆಲೆಯಲ್ಲಿ ಎಲ್ಲ 40 ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಲಾಗಿದೆ.

## ಸಿಎಂ ಸೇರಿ ಕೈ ನಾಯಕರಿಗೆ ಸುಪ್ರೀಂನಿಂದ ತಾತ್ಕಾಲಿಕ ರಿಲೀಫ್



ನವದೆಹಲಿ: ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ದಾಖಲಾಗಿದ್ದ ಕ್ರಿಮಿನಲ್ ಪ್ರಕರಣದ ವಿಚಾರಣೆಗೆ ಮತ್ತು ಖುದ್ದು ಹಾಜರಾಗಲು ಕೆಳಹಂತದ ನ್ಯಾಯಾಲಯ ನೀಡಿದ ಸಮನ್ಸ್‌ಗೆ ಸುಪ್ರೀಂಕೋರ್ಟ್ ಮಧ್ಯಂತರ ತಡೆ ನೀಡಿದೆ.

ಪ್ರಕರಣದ ವಿಚಾರಣೆ ನಡೆಸಿದ ನ್ಯಾ. ಹೃಷಿಕೇಶ್ ನೇತೃತ್ವದ ದ್ವಿ ಸದಸ್ಯ ಪೀಠ, ಪ್ರತಿವಾದಿಗಳಿಗೆ ಸಮನ್ಸ್ ಜಾರಿ ಮಾಡಿ ಆರು ವಾರದಲ್ಲಿ ಉತ್ತರಿಸಲು ಸೂಚನೆ ನೀಡಿದೆ. ಬೆಳಗಾವಿ ಮೂಲದ ಗುತ್ತಿಗೆದಾರ ಸಂತೋಷ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಅಂದಿನ ಸಚಿವ ಕೆ.ಎಸ್ ಈಶ್ವರಪ್ಪ ರಾಜೀನಾಮೆಗೆ ಒತ್ತಾಯಿಸಿ 2022 ರಲ್ಲಿ ಅಂದು ವಿಪಕ್ಷ ನಾಯಕರಾಗಿದ್ದ ಸಿದ್ದರಾಮಯ್ಯ ನೇತೃತ್ವದಲ್ಲಿ ಕಾಂಗ್ರೆಸ್ ನಾಯಕರು ಪ್ರತಿಭಟನೆ ನಡೆಸಿದ್ದರು. ಪ್ರತಿಭಟನೆ ಹಿನ್ನೆಲೆ ಕಾಂಗ್ರೆಸ್ ನಾಯಕರಾದ ಸಿದ್ದರಾಮಯ್ಯ, ಎಂ.ಬಿ. ಪಾಟೀಲ್, ರಾಮಲಿಂಗಾರೆಡ್ಡಿ, ರಣದೀಪ್ ಸಿಂಗ್ ಸುರ್ಜೇವಾಲ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಸಲಾಗಿತ್ತು.

ಪ್ರಕರಣದ ವಿಚಾರಣೆ ನಡೆಸಿದ್ದ ಜನಪ್ರತಿನಿಧಿಗಳ ನ್ಯಾಯಾಲಯ ಆರೋಪಿಗಳು ನ್ಯಾಯಾಲಯದ ಮುಂದೆ ಖುದ್ದು ವಿಚಾರಣೆಗೆ ಹಾಜರಾಗಬೇಕು ಎಂದು ಆದೇಶಿಸಿತ್ತು. ಈ ಆದೇಶವನ್ನು ರದ್ದುಗೊಳಿಸಲು ಹೈಕೋರ್ಟ್ ಗೆ ಅರ್ಜಿ ಸಲ್ಲಿಸಲಾಗಿತ್ತು. ಪ್ರಕರಣ ರದ್ದುಗೊಳಿಸಲು ನಿರಾಕರಿಸಿದ ಹೈಕೋರ್ಟ, ಅರ್ಜಿದಾರರಿಗೆ ತಲಾ 10,000 ವೆಚ್ಚ ಭರಿಸಲು ಆದೇಶಿ ಸಿತ್ತು. ಈ ಹಿನ್ನೆಲೆ ಹೈಕೋರ್ಟ್ ಆದೇಶ ಪ್ರಶ್ನಿಸಿ ಸಿಎಂ ಸಿದ್ದರಾಮಯ್ಯ ಮತ್ತು ಇತರೆ ನಾಯಕರು ಸುಪ್ರೀಂಕೋರ್ಟ್ ಗೆ ಮೇಲ್ಮನವಿ ಅರ್ಜಿ ಸಲ್ಲಿಸಿ ಪ್ರಕರಣ ರದ್ದು ಕೋರಿದ್ದರು.

ಇಂದು ಸುಪ್ರೀಂಕೋರ್ಟ್ ಈ ಪ್ರಕರಣದ ವಿಚಾರಣೆ ನಡೆಸಿತು. ಸಿಎಂ ಸಿದ್ದರಾಮಯ್ಯ ಪರ ವಾದ ಮಂಡಿಸಿದ ವಕೀಲ ಅಭಿಷೇಕ್ ಮನುಸಿಂಘ್ವಿ, ಇದೊಂದು ರಾಜಕೀಯ ಪ್ರತಿಭಟನೆಯಾಗಿದ್ದು, ಕ್ರಿಮಿನಲ್ ಮೊಕದ್ದಮೆಯು ಸಂವಿಧಾನದ 19(1)(ಎ) ವಿಧಿಯಡಿ ಪ್ರತಿಭಟಿಸುವ ಹಕ್ಕಿನ ಉಲ್ಲಂಘನೆಯಾಗಿದೆ.

ಯಾವುದೇ ಕ್ರಿಮಿನಲ್ ಉದ್ದೇಶವಿಲ್ಲದೆ ಶಾಂತಿಯುತವಾಗಿ ನಡೆಸಿದ ರಾಜಕೀಯ ಪ್ರತಿಭಟನೆಯನ್ನು ದಂಡದ ನಿಬಂಧನೆಗಳನ್ನು ಬಳಸಿ ತಡೆಯಲು ಸಾಧ್ಯವಿಲ್ಲ ಎಂದು ಹೇಳಿದರು. ಇತ್ತ ರಣದೀಪ್ ಸುರ್ಜೆವಾಲ ಪರ ವಾದ ಮಂಡಿಸಿದ ವಕೀಲ ಕಪಿಲ್ ಸಿಬಲ್, ಇಂತಹ ಬೆಳವಣಿಗೆ ತುಂಬಾ ಅಪಾಯಕಾರಿ. ಈ ನಿಯಮಗಳಿಂದ ಪ್ರತಿ ಸಾರ್ವಜನಿಕ ಪ್ರತಿಭಟನೆಯು ಕಾನೂನುಬಾಹಿರವಾಗಿರುತ್ತದೆ ಎಂದು ವಾದಿಸಿದರು.

ವಾದ ಆಲಿಸಿದ ಪೀಠ, ಆರು ವಾರಗಳಲ್ಲಿ ಉತ್ತರಿಸುವಂತೆ ಪ್ರತಿವಾದಿಗಳಿಗೆ ನೋಟಿಸ್ ಜಾರಿ ಮಾಡಿತು. ಅಲ್ಲದೇ ಪ್ರಕರಣದ ಮುಂದಿನ ವಿಚಾರಣೆಗೆ ತಡೆ ನೀಡಿತು.

ಇದೇ ವೇಳೆ ಅರ್ಜಿದಾರರಿಗೆ ತಲಾ 10,000 ರೂ.ಗಳ ವೆಚ್ಚವನ್ನು ವಿಧಿಸಿದ ಕರ್ನಾಟಕ ಹೈಕೋರ್ಟ್‌ನ ಆದೇಶಕ್ಕೂ ತಡೆ ನೀಡಿತು.

ಸುಪ್ರೀಂಕೋರ್ಟ್ ಮಧ್ಯಂತರ ಆದೇಶದಿಂದಾಗಿ ಫೆ.26 ರಂದು ಕೋರ್ಟ್ ಹಾಜರಾಗಬೇಕಿದ್ದ ಸಿಎಂ ಸಿದ್ದರಾಮಯ್ಯ ಅವರಿಗೆ ತಾತ್ಕಾಲಿಕ ರಿಲೀಫ್ ಸಿಕ್ಕಂತಾಗಿದೆ.

## ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಉತ್ಸವ–2024

# ಶಿವಾಜಿ ಮಹಾರಾಜರ ಶೌರ್ಯ, ಸಾಹಸ, ರಾಷ್ಟ್ರಭಕ್ತಿ ಎಲ್ಲರಿಗೂ ಪ್ರೇರಣೆದಾಯಕ: ಪಿ.ಜಿ ಕೆಂಪಣ್ಣವರ



ಬೆಳಗಾವಿ: ಛತ್ರಪತಿ ಶಿವಾಜಿ ಮಹಾರಾಜರು ಸ್ವಾಭಿಮಾನಿ ರಾಷ್ಟ್ರನಿರ್ಮಾಣಕ್ಕೆ ಹೋರಾಡಿ ಹಿಂದೂಸ್ಥಾನವನ್ನು ಒಗ್ಗೂಡಿಸಲು ಬಹುವಾಗಿ ಶ್ರಮಿಸಿದ್ದಾರೆ. ಸುಮಾರು 3 ಸಾವಿರ ಕೋಟೆಗಳನ್ನು ಗೆದ್ದು ಕ್ರಮೇಣ ಇಡೀ ಪಶ್ಚಿಮ ಭಾರತವನ್ನು ತಮ್ಮ ಆಳ್ವಿಕೆಗೆ ತಂದರು. ಶಿವಾಜಿಯ ಶೌರ್ಯ, ಸಾಹಸ, ರಾಷ್ಟ್ರಭಕ್ತಿ, ಆಡಳಿತ ಎಂದೆಂದಿಗೂ ಪ್ರೇರಣೆದಾಯಕ ಎಂದು ಬೆಳಗಾವಿ ರಾಜಾ ಲಾಖಮಗೌಡ ಕಾನೂನು ಮಹಾವಿದ್ಯಾಲಯದ ಸಂದರ್ಶಕ ಪ್ರಾಧ್ಯಾಪಕರಾದ ಪಿ.ಜಿ ಕೆಂಪಣ್ಣವರ. ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆಯ ಸಂಂ–ಯುಕ್ತಾಶ್ರಯದಲ್ಲಿ ಶಿವಾಜಿ ಉದ್ಯಾನವನದಲ್ಲಿ ಸೋಮವಾರ (ಫೆ.19) ನಡೆದ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಉತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹಿಂದೂಗಳಲ್ಲಿ ಜನ ಜಾಗೃತಿ ಮೂಡಿಸಿ, ಹಿಂದೂಸ್ಥಾನದ ಏಕತೆಗೆ ಶ್ರಮಿಸಿದ ಛತ್ರಪತಿ ಶಿವಾಜಿ ಮಹಾರಾಜರ ಕೊಡುಗೆ ಅಪಾರ. ಶಿವಾಜಿ ಮಹಾರಾಜರ ಪೂರ್ವಜರು ಮೂಲತಃ ಕರ್ನಾಟಕ ರಾಜ್ಯದವರಾಗಿದ್ದಾರೆ. ಮನಸಿದ್ದರೆ ಮಾರ್ಗ ಎಂಬ ಸಂದೇಶ ಸಾರಿದ ಶಿವಾಜಿ ಮಹಾರಾಜರು ಅವರ ತಾಯಿಯ ಆಶಯದಂತೆ ಹಿಂದೂ ಸಾಮ್ರಾಜ್ಯ ಕಟ್ಟಿ, ಸಂರಕ್ಷಣೆ ಮಾಡಿದ್ದಾರೆ.

ತಂದೆ ತಾಯಿಯ ಮಾರ್ಗದರ್ಶನದಲ್ಲಿ ನಡೆದ ಶಿವಾಜಿ ಮಹಾರಾಜರು ದೇಶದಲ್ಲಿ ಆಗುತ್ತಿರುವ ಮೊಘಲ್ ದಾಳಿಗಳನ್ನು ತಪ್ಪಿಸಿ ಮೊಗಲ್ ಸಾಮ್ರಾಜ್ಯದ ವಿರುದ್ಧ ಹೋರಾಡಿ, ದೇಶದಲ್ಲಿ ತನ್ನದೇಯಾದ ಸಾಮ್ರಾಜ್ಯ ಸ್ಥಾಪಿಸುವ ಮೂಲಕ ಹಿಂದೂ ಸಾಮ್ರಾಜ್ಯದ ಕೀರ್ತಿ ಪತಾಕೆ ಹಾ–ರಿಸಿದ್ದಾರೆ ಎಂದು ಪ್ರಾಧ್ಯಾಪಕರಾದ ಪಿ.ಜಿ ಕೆಂಪಣ್ಣವರ ಅವರು ಉಪನ್ಯಾಸದಲ್ಲಿ ತಿಳಿಸಿದರು.

ಮಹಾನಗರ ಪಾಲಿಕೆ ಮೇಯರ್ ಸವಿತಾ ಕಾಂಬಳೆ, ಉಪ ಮೇಯರ್ ಆನಂದ ಚವ್ಹಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಪಾಲಿಕೆ ಸದಸ್ಯ ರಾಜು ಭಾತಖಾಂಡೆ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಅಂಜಲಿ ಪಾಟೀಲ ವಂದಿಸಿದರು. ಆಶಾ ಯಮಕನಮರಡಿ ನಿರೂಪಿಸಿದರು.

# ಜೈನಮುನಿ ಆಚಾರ್ಯ ವಿದ್ಯಾಸಾಗರ ಮಹಾರಾಜರ ನಿಧನಕ್ಕೆ ವಿಧಾನಸಭೆಯಲ್ಲಿ ಸಂತಾಪ



ಬೆಂಗಳೂರು: ಜೈನಮುನಿಗಳಾದ ಆಚಾರ್ಯ ವಿದ್ಯಾಸಾಗರ ಮಹಾರಾಜರ ನಿಧನಕ್ಕೆ ವಿಧಾನ ಸಭೆಯಲ್ಲಿಂದು ಸಂತಾಪ ಸೂಚಿಸಲಾಯಿತು. ಸೋಮವಾರ ಬೆಳಿಗ್ಗೆ ಸದನ ಸಮಾವೇಶಗೊಂಡಾಗ ಸಭಾಧ್ಯಕ್ಷ ಯು.ಟಿ.ಖಾದರ್ ಅವರು ಸಂತಾಪ ಸೂಚನಾ ನಿರ್ಣಯವನ್ನು ಕೈಗೆತ್ತಿಕೊಂಡು, ವಿದ್ಯಾಸಾಗರ ಮಹಾರಾಜರು ನಿಧನರಾಗಿರುವುದನ್ನು ಅತ್ಯಂತ ವಿಷಾದದಿಂದ ಸದನಕ್ಕೆ ತಿಳಿಸಿದರು.

ವಿದ್ಯಾಸಾಗರ ಮಹಾರಾಜರು 1946 ರ ಅಕ್ಟೋಬರ್ 10 ರಂದು ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲೂಕಿನ ಸದಲಗದಲ್ಲಿ ಜನಿಸಿದರು. ದಿಗಂಬರ ಜೈನ ಪಂಥದವರಾಗಿದ್ದ ಮುನಿಗಳು ತಮ್ಮ 22ನೇ ವಯಸ್ಸಿನಲ್ಲಿ ಆಚಾರ್ಯ ಜ್ಞಾನಸಾಗರ ಮುನಿಮಹಾರಾಜರಿಂದ ಮುನಿದೀಕ್ಷೆ ಪಡೆದು ನಂತರ ಆಚಾರ್ಯ ಪದವಿ ಪಡೆದಿದ್ದ ವಿದ್ಯಾಸಾಗರ ಮಹಾರಾಜರು ಪ್ರಾಕೃತ ಭಾಷೆಗಳು ಸೇರಿದಂತೆ ಹಲವು ಕೃತಿಗಳನ್ನು ರಚಿಸಿದ್ದು, ನಿರಂಜನ ಶತಕ, ಭಾವನ ಶತಕ, ಶ್ರಮನ ಶತಕ ಪ್ರಮುಖವಾಗಿವೆ. ಅಲ್ಲದೆ ಕನ್ನಡ, ಹಿಂದಿ, ಮರಾಠಿ ಸೇರಿದಂತೆ 8 ಭಾಷೆಗಳಲ್ಲಿ ಪಾಂಡಿತ್ಯ ಹೊಂದಿದ್ದ ಅವರು, ಹಿಂದಿಯಲ್ಲಿ ರಚಿಸಿದ ಮೂಖಮಾಠಿ ಎಂಬ ಮಹಾಕಾವ್ಯವು ಪ್ರಸಿದ್ಧಿಯಾಗಿದೆ ಎಂದು ಹೇಳಿದರು.

ಜೈನಮುನಿಗಳಾಗಿ ವಿದ್ಯಾಸಾಗರ ಮಹಾರಾಜರು 120 ಜನರಿಗೆ ಮುನಿದೀಕ್ಷೆಯನ್ನು ನೀಡಿದ್ದು, ಹಲವರಿಗೆ ಬ್ರಹ್ಮಚರ್ಯ ದೀಕ್ಷೆಗಳನ್ನು ನೀಡಿದ್ದಾರೆ. ದೇಶದಲ್ಲಿಯೇ ಅತೀ ದೊಡ್ಡ ಗೋಶಾಲೆಯನ್ನು ನಿರ್ಮಿಸಿದ್ದು, ಬಡ ನಿರ್ಗತಿಕ ಮಕ್ಕಳಿಗೆ ಪದವಿಯವರೆಗೆ ಉಚಿತ ಶಿಕ್ಷಣವನ್ನು ನೀಡಿದ್ದಾರೆ ಎಂದು ಶ್ಲಾಘಿಸಿದರು.

ತಮ್ಮ ಜೀವನದುದ್ದಕ್ಕೂ ಜೈನ ಧರ್ಮದ ತತ್ವಗಳನ್ನು ಪಾಲಿಸಿ, ಬೋಸುತ್ತಾ ಕವಿ, ಯೋಗಿ, ಸಾಧಕ–ಚಿಂತಕ ಹಾಗೂ ದಾರ್ಶನಿಕ ರೂಪದಲ್ಲಿ ಕಾಣಿಸಿಕೊಂಡಿದ್ದ ಮೇರು ಸಂತ ಆಚಾರ್ಯರು ಛತ್ತೀಸ್ಗಡ ರಾಜ್ಯದ ಡೋಂಗರಗಡದಲ್ಲಿರುವ ಚಂದ್ರಗಿರಿ ತೀರ್ಥದಲ್ಲಿ ಸಲ್ಲೇಖನ ವ್ರತ ಕೈಗೊಂಡು ನಿನ್ನೆ ನಸುಕಿನ ಜಾವ ಇಹಲೋಕವನ್ನು ತ್ಯಜಿಸಿದ್ದಾರೆ ಎಂದು ವಿಷಾದಿಸಿದರು.

ಸಭಾಧ್ಯಕ್ಷರು ಮಂಡಿಸಿದ ಸಂತಾಪ ಸೂಚನಾ ನಿರ್ಣಯವನ್ನು ಬೆಂಬಲಿಸಿ ಮಾತನಾಡಿದ ಕಂದಾಯ ಸಚಿವ ಕೃಷ್ಣಭೈರೇಗೌಡ, ವಿದ್ಯಾಸಾಗರ ಮಹಾರಾಜರು ಸಲ್ಲೇಖನ ವ್ರತ ಆಚರಣೆ ಮೂಲಕ ದೇಹತ್ಯಾಗ ಮಾಡಿದ್ದಾರೆ. ಲೌಖಿಕ ಜೀವನವನ್ನು ತ್ಯಾಗ ಮಾಡಿ ಮೇಲ್ಮಟ್ಟದ ಜೀವನ ನಡೆಸಿ ನಮ್ಮೆಲ್ಲರಿಗೂ ದಾರಿ ತೋರಿಸಿದ್ದಾರೆ. ನಾವೆಲ್ಲಾ ಆಸೆ, ಆಕಾಂಕ್ಷೆಗಳ ಜಂಜಾಟದ ಬದುಕಿನಲ್ಲಿ ಸಿಲುಕುತ್ತೇವೆ. ಅವುಗಳ ಹೊರತಾಗಿಯೂ ಜೀವನ ನಡೆಸಬಹುದು ಎಂದು ಅವರು ತೋರಿಸಿದ್ದಾರೆ. ಅವರ ಆಲೋಚನೆಗಳು ಅಮರವಾಗಿ ನಮ್ಮೊಂದಿಗೆ ಉಳಿಯಲಿದೆ ಎಂದು ಸ್ಮರಿಸಿದರು.

ವಿರೋಧಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ವಿದ್ಯಾಸಾಗರ ಮಹಾರಾಜರ ಇಡೀ ಕುಟುಂಬ ಜೈನ ಪರಂಪರೆಗೆ ಸೇರಿದವರು. ನಮ್ಮ ದೇಶದಲ್ಲಿ ಋಷಿಮುನಿಗಳ ಪರಂಪರೆ ಇದೆ. ಧರ್ಮ, ಉಳಿಸಲು ಅವರು ಮಾಡಿರುವ ಕಾರ್ಯ ಸ್ಮರಣೀಯ ಎಂದರು. ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮಾತನಾಡಿ, ಜೈನ ಧರ್ಮೀಯರು ಸಣ್ಣ ವಯಸ್ಸಿನಲ್ಲಿಯೇ ದೀಕ್ಷೆ ಪಡೆಯುತ್ತಾರೆ. ಐಷಾರಾಮಿ ಜೀವನವನ್ನು ತ್ಯಜಿಸಿ ಧರ್ಮದ ಹಾದಿಯಲ್ಲಿ ನಡೆಯುತ್ತಾರೆ. ಗೋವಿನ ರಕ್ಷಣೆ ಪವಿತ್ರವೆಂದು ಭಾವಿಸಿದ್ದಾರೆ. ನಂದಗಾವ್ನಲ್ಲಿ 3 ಸಾವಿರ ಎಕರೆಯಲ್ಲಿ ಒಂದೂವರೆ ಲಕ್ಷ ಗೋವುಗಳನ್ನು ಸಂರಕ್ಷಣೆ ಮಾಡಲಾಗಿದೆ. ದೇಶ ಹಾಗೂ ಸಮಾಜಕ್ಕೆ ಅವರು ಮಾಡಿದ ಸೇವೆ ಉತ್ತಮವಾದುದು ಎಂದು ಗುಣಗಾನ ಮಾಡಿದರು.

ಶಾಸಕ ಚನ್ನಬಸಪ್ಪ ಅವರು ಸಂತಾಪ ಸೂಚನಾ ನಿರ್ಣಯವನ್ನು ಬೆಂಬಲಿಸಿ ಮಾತನಾಡಿದರು. ಬಳಿಕ ಸದನದ ಸದಸ್ಯರೆಲ್ಲರೂ ಎದ್ದು ನಿಂತು ಒಂದು ನಿಮಿಷ ಮೌನಾಚರಣೆ ಮಾಡುವ ಮೂಲಕ ಸಂತಾಪ ಸೂಚಿಸಿದರು.

# ಕಿರುಕುಳ: ವಿಷ ಸೇವಿಸಿದ ಮಹಿಳೆ




ಬೆಳಗಾವಿ: ಸಾಲ ಮರುಪಾವತಿ ವಿಚಾರದಲ್ಲಿ ಖಆಈಅ ಬ್ಯಾಂಕ್ ಸಿಬ್ಬಂದಿ ಕಿರುಕುಳ ನೀಡ್ತಿದ್ದಾರೆಂದು ಆರೋಪಿಸಿ ಮಹಿಳೆಯೊಬ್ಬರು ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ ಘಟನೆ ಬೈಲಹೊಂಗಲ ತಾಲೂಕಿನ ಬೈರನಟ್ಟಿ ಗ್ರಾಮದಲ್ಲಿ ನಡೆದಿದೆ.

ಹಸು ಕೊಂಡುಕ್ಕೊಳ್ಳಲು ಮಹಿಳೆಯ ಮಗ 2 ಲಕ್ಷ ರೂ. ಸಾಲ ತೆಗೆದುಕೊಂಡಿದ್ದ. ಯುವಕ 2 ಲಕ್ಷ ರೂ. ಸಾಲಕ್ಕೆ ಪ್ರತಿ ತಿಂಗಳು ಹಣ ತುಂಬುತ್ತಾ ಬಂದಿದ್ದ. ಜಮಖಂಡಿಯಲ್ಲಿರುವ ಹೋಟೆಲ್ ಒಂದರಲ್ಲಿ ಕೆಲಸ ಮಾಡಿ ಸಾಲ ತೀರಿಸುತ್ತಿದ್ದ. ಆದರೆ ಈ ತಿಂಗಳು 15 ದಿನ ತಡವಾಗಿದ್ದಕ್ಕೆ ಐಡಿಎಫ್ಸಿ ಬ್ಯಾಂಕ್ ಸಿಬ್ಬಂದಿ ಸೋಮು ಕಿರಗಾವ ಹಾಗೂ ಇನ್ನೋರ್ವ ಸಿಬ್ಬಂದಿಯಿಂದ ಕಿರುಕುಳ ನೀಡಿದ್ದಾರೆ ಎನ್ನಲಾಗಿದೆ. ನನ್ನ ಮಗ ಬಂದು ನಿಮ್ಮ ದುಡ್ಡು ಕಟ್ಟುತ್ತಾನೆ ಬಿಡಿ ಎಂದು ಯುವಕನ ತಾಯಿ ಅಂಗಲಾಚಿಕೊಂಡಿದ್ದಾಳೆ. ಅಲ್ಲದೇ ಮನೆ ಬಿಟ್ಟು ಹೊರಗೆ ಬಾ, ನಾವು ಮನೆಗೆ ಕೀಲಿ ಹಾಕುತ್ತೇವೆ ಎಂದು ಯುವಕನ ತಾಯಿಗೆ ಬೆದರಿಕೆ ಹಾಕಿದ್ದಾರೆ ಎನ್ನಲಾಗಿದೆ. ಆಗ ಮರ್ಯಾದೆ ವಿಚಾರವಾಗಿ ನಾನು ವಿಷ ಸೇವಿಸುತ್ತೇನೆ ಎಂದಿದ್ದಾಳೆ. ಅದಕ್ಕೆ ಸಿಬ್ಬಂದಿ ನೀನು ವಿಷವನ್ನಾದರೂ ಕುಡಿದು ಸಾಯಿ. ವಿಷ ಕುಡಿದ ಮೇಲಾದರೂ ನಿನ್ನ ಮಗ ಬರುತ್ತಾನೆ ಎಂದಿದ್ದಾರೆ. ಇದರಿಂದ ಮತ್ತಷ್ಟು ದುಃಖಿ–ತಳಾದ ಮಹಿಳೆ ವಿಷವನ್ನು ಸೇವಿಸಿದ್ದಾಳೆ. ಅಲ್ಲಿದ್ದ ಸ್ಥಳೀಯರು ಕೂಡಲೇ ಆಸ್ಪತ್ರೆಗೆ ದಾಖಲಿಸಿದ್ದಾರೆ. ಚಿಕಿತ್ಸೆಗೆ ಸ್ಪಂದಿಸಿರುವ ಅವರು, ಚೇತರಿಸಿಕೊಳ್ತಿದ್ದಾರೆ. ಬೈಲಹೊಂಗಲ ತಾಲೂಕಿನ ನೇಸರಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ವಸತಿ ಶಾಲೆಗಳಲ್ಲಿ ಘೋಷವಾಕ್ಯ ತೆಗೆದುಹಾಕುವ ಯಾವುದೇ ಆದೇಶ ಹೊರಡಿಸಿಲ್ಲ: ಸಚಿವ ಮಹಾದೇವಪ್ಪ ಸ್ಪಷ್ಟನೆ

ಬೆಂಗಳೂರು: ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲೆಗಳ ಪ್ರವೇಶ ದ್ವಾರದಲ್ಲಿ 'ಜ್ಞಾನದೇಗುಲವಿದು ಕೈಮುಗಿದು ಒಳಗೆ ಬನ್ನಿ' ಘೋಷವಾಕ್ಯವನ್ನು ತೆಗೆದುಹಾಕುವ ಯಾವುದೇ ಆದೇಶವನ್ನು ರಾಜ್ಯ ಸರ್ಕಾರ ಹೊರಡಿಸಿಲ್ಲ ಎಂದು ಸಮಾಜ ಕಲ್ಯಾಣ ಸಚಿವ ಎಚ್.ಸಿ. ಮಹಾದೇವಪ್ಪ ಅವರು ಸೋಮವಾರ ಸ್ಪಷ್ಟಪಡಿಸಿದ್ದಾರೆ.

ಘೋಷವಾಕ್ಯ ಬದಲಾವಣೆ ವಿವಾದ ತೀವ್ರ ಸ್ವರೂಪ ಪಡೆಯುತ್ತಿದ್ದಂತೆ ಎಚ್ಚೆತ ಸರ್ಕಾರ, ಪ್ರಸ್ತುತ ಇರುವ ಘೋಷವಾಕ್ಯ ತೆಗೆದುಹಾಕುವ ಯಾವುದೇ ಆದೇಶ ನೀಡಿಲ್ಲ ಎಂದು ಸಚಿವ ಮಹಾದೇವಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಕ್ಕಳಲ್ಲಿ ಕಲಿಕೆಯ ದೃಷ್ಟಿಯಿಂದ ವೈಜ್ಞಾನಿಕತೆ, ವೈಚಾರಿಕತೆ ಮೂಡಿಸಲು ಜೊತೆಗೆ ಯೋಚನಾ ಶಕ್ತಿಯನ್ನು ಹರಡುವ ದೃಷ್ಟಿಯಿಂದ ಸಾಮಾಜಿಕ ಜಾಲತಾಣದಲ್ಲಿ ಚರ್ಚೆ ನಡೆಸಲಾಗಿದೆ. ಕೆಲವರು ಜ್ಞಾನ ದೇಗುಲವಿದು ಧೈರ್ಯವಾಗಿ ಪ್ರಶ್ನಿಸಿ ಎಂದು ಶಾಲೆಗಳಲ್ಲಿ ಹಾಕಿದರೆ ಹೇಗೆ ಎಂಬ ಆಲೋಚನೆ ಮುಂದಿಟ್ಟಿದ್ದಾರೆ. ಈ ಆಲೋಚನೆಗೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿರುತ್ತದೆ. ಧೈರ್ಯವಾಗಿ ಪ್ರಶ್ನಿಸಿ ಎಂದರೆ ಕುವೆಂಪು ಅವರ ವಿಚಾರ ಕ್ರಾಂತಿಗೆ ಆಹ್ವಾನ ಪ್ರಬಂಧದ ಆಶಯ. ಕುವೆಂಪು ಅವರಿಗೆ ಅವಮಾನ ಮಾಡುವ ಎಸಗುವ ಯಾವುದೇ ಪ್ರಮಾದ ಇಲ್ಲಿ ಜರುಗಿರುವುದಿಲ್ಲ ಎಂದು ಹೇಳಿದ್ದಾರೆ.

ಶಿಕ್ಷಣದ ಉದ್ದೇಶವೇ ಮಕ್ಕಳಲ್ಲಿ ವೈಚಾರಿಕತೆಯ ಜೊತೆಗೆ, ಪ್ರಶ್ನಿಸುವ ಸಾಮರ್ಥ್ಯ ಬೆಳೆಸುವುದಾಗಿದೆ. ಐಸಾಕ್ ನ್ಯೂಟನ್, ಆಲ್ಬರ್ಟ್ ಐನ್ ಸ್ಟೀನ್ ನಿಂದ ಹಿಡಿದು ಬಹಳಷ್ಟು ವಿಜ್ಞಾನಿಗಳು ಇದನ್ನೇ ಪ್ರತಿಪಾದಿಸಿದ್ದು, ಕಲಿಯುವ ಮಕ್ಕಳಲ್ಲಿ ಪ್ರಶ್ನಿಸುವ ಸಾಮರ್ಥವನ್ನು ಬೆಳೆಸುವ ನಿಟ್ಟಿನಲ್ಲಿ ಇಂತಹ ಆಲೋಚನೆಗಳನ್ನು ನಾವು ಮುಕ್ತ ಮನಸ್ಸಿನಿಂದ ಸ್ವಾಗತಿಸಬೇಕು.

# 'ಅಪಘಾತ ವಿಮಾ ಪರಿಹಾರ' ಮೊತ್ತ '3 ಲಕ್ಷದಿಂದ 1 ಕೋಟಿ'ಗೆ ಹೆಚ್ಚಳ: ಬಿಎಂಟಿಸಿ ಎಂ.ಡಿ ರಾಮಚಂದ್ರನ್



ಬೆಂಗಳೂರು: ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ನೌಕರರಿಗೆ ಅಪಘಾತ ವಿಮಾ ಪರಿಹಾರವನ್ನು 1 ಕೋಟಿಗೆ ಹೆಚ್ಚಳ ಮಾಡಲಾಗಿತ್ತು. ಈ ಬೆನ್ನಲ್ಲೇ ಬಿಎಂಟಿಸಿ ನೌಕರರಿಗೂ 3 ಲಕ್ಷ ಇದ್ದಂತ ಅಪಘಾತ ವಿಮಾ ಪರಿಹಾರ ಮೊತ್ತವನ್ನು 1 ಕೋಟಿಗೆ ಹೆಚ್ಚಳ ಮಾಡಿ ಸರ್ಕಾರ ಆದೇಶಿಸಿದೆ.

ಈ ಕುರಿತಂತೆ ಮಾಹಿತಿ ಹಂಚಿಕೊಂಡಿರುವಂತ ಬಿಎಂಟಿಸಿ ಎಂ.ಡಿ ರಾಮಚಂದ್ರನ್ ಅವರು, ಬಿಎಂಟಿಸಿ ನೌಕರರಿಗೆ ಅಪಘಾತ ವಿಮಾ ಪರಿಹಾರದ ಮೊತ್ತವನ್ನು 1 ಕೋಟಿಗೆ ಹೆಚ್ಚಳ ಮಾಡಲಾಗಿದೆ ಎಂಬುದಾಗಿ ತಿಳಿಸಿದ್ದಾರೆ.

ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ಕೆ–ಎಸ್ ಆರ್ ಟಿಸಿ ನೌಕರರಂತೆ ಬಿಎಂಟಿಸಿ ನೌಕರರಿಗೂ ಅಪಘಾತ ವಿಮಾ ಪರಿಹಾರದ ಮೊತ್ತವನ್ನು 1 ಕೋಟಿಗೆ ಹೆಚ್ಚಿಸೋದಕ್ಕೆ ಸೂಚಿಸಿದ್ದರು. ಅವರ ಸೂಚನೆ ಮೇರೆಗೆ ಹೆಚ್ಚಳ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಅಂದಹಾಗೇ ಈಗಾಗಲೇ ಕೆ ಎಸ್ ಆರ್ ಟಿ ಸಿ ನೌಕರರಿಗೆ ಕರ್ತವ್ಯ ನಿರತರಾದಂತ ಸಂದರ್ಭದಲ್ಲಿಯೇ ಅಪಘಾತದಿಂದ ಮೃತಪಟ್ಟರೇ ಅವರ ಅವಲಂಬಿತರು, ಕುಟುಂಬಸ್ಥ–ರಿಗೆ 1 ಕೋಟಿ ಅಪಘಾತ ವಿಮಾ ಪರಿಹಾರವನ್ನು ಜಾರಿಗೊಳಿಸಲಾಗಿದೆ. ಆ ಯೋಜನೆಯನ್ನು ಈಗ ಬಿಎಂಟಿಸಿ ನೌಕರರಿಗೂ ಜಾರಿಗೊಳಿಸಲಾಗಿದೆ.

ಬಿಎಂಟಿಸಿ ನೌಕರರಿಗೆ ಅಪಘಾತ ವಿಮಾ ಪರಿಹಾರವನ್ನು 3 ಲಕ್ಷದಿಂದ 1 ಕೋಟಿಗೆ ಹೆಚ್ಚಳ ಮಾಡಲಾಗಿದ್ದು, ಈ ಯೋಜನೆ ಇಂದಿನಿಂದಲೇ ಜಾರಿಗೊಳ್ಳಲಿದೆ. ಈ ಮೂಲಕ ಬಿಎಂಟಿಸಿ ನೌಕರ–ರಿಗೆ ಗುಡ್ ನ್ಯೂಸ್ ನೀಡಲಾಗಿದೆ.

# "ಗಡಿನಾಡ ಗಂಧರ್ವ"



"ಭೂವಿಯ ಜೀವಕ್ಕೆ ಸೂರ್ಯನೆ ಕಾರಣ, ಬೆಳದಿಂಗಳ ಹಬ್ಬಕ್ಕೆ ಚಂದಿರನೆ ಹೂರಣ ಹಾಗೆಯೇ ಕು. ರಾಹುಲ ಕೊರವರವರು ನಮ್ಮೆಲ್ಲರ ಬಾಳಿನ ಆಶಾಕಿರಣ".

ಕನ್ನಡದ ಅಪ್ಪಟ ಅಭಿಮಾನಿ, ಕನ್ನಡ ಸಾಹಿತ್ಯದ ಜ್ಞಾನ ಕಣಜ, ಬಡವರ ಜೀವನಾಡಿ, ಕನ್ನಡದ ಕುವರಾನಾಗಿ ಬಿಂಬಿತನಾದ ಅಪರೂಪದ ಅಪರಂಜಿ ಕು. ರಾಹುಲ ಅಣ್ಣಾ ಕೊರವ ಇವರು ಬಡತನದ ಬೆಗೆಯಲ್ಲಿ ಬೆಂದು, ಮಿಂದು ತಮ್ಮ ಶತಪ್ರಯತ್ನದ ಫಲವಾಗಿ ಉತ್ತುಂಗದ ಶಿಖರವನ್ನೆರುತ್ತಿರುವ ಕು. ರಾಹುಲ ಕೊರವ ಇವರು ಮೂಲತಃ ಕರುನಾಡಿನ ಗಡಿ ಅಂಚಿನಲ್ಲಿ ಬರುವ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲೂಕಿನ ಶಮನೇವಾಡಿ ಗ್ರಾಮದ ಬಡ ಕುಟುಂಬದಲ್ಲಿ ಜನಿಸಿದ ಇವರು ಇಂದು ಎಷ್ಟೋ ಬಡಜನರ ಬಾಳಿಗೆ ಬೆಳಕಾಗಿದ್ದಾರೆ ಎಂದು ಹೇಳಿದರೆ ತಪ್ಪಾಗಲಾರದು, ಕಡುಗಷ್ಟದಲ್ಲಿ ಪ್ರಾಥಮಿಕ ವಿದ್ಯಾಭ್ಯಾಸ ಪೂರ್ಣಗೊಳಿಸಿ ಕೃಷಿಯಲ್ಲಿ ಡಿಪ್ಲೋಮಾ ಪದವಿ ಹಾಗೂ ನಿರ್ವಹಣಾ ಶಾಸ್ತ್ರ ಪದವಿ ಪಡೆದು ಇವತ್ತು ದೇಶದ ಹೃದಯ ಮಿಡಿತ ಎಂದೆ ಖ್ಯಾತಿಪಡೆದ ರಾಷ್ಟ್ರರಾಜಧಾನಿ ದೆಹಲಿಯಲ್ಲಿ ದೊಡ್ಡ ಸಂಸ್ಥೆಯೊಂದರಲ್ಲಿ ತಮ್ಮ ಸೇವೆ ಸಲ್ಲಿವುದರಲ್ಲಿ ಕಾರ್ಯನಿರತರಾಗಿದ್ದಾರೆ.

ಸರಳ ಸಜ್ಜನಿಕೆಯ ವ್ಯಕ್ತಿ ತಮ್ಮ ಉಪಜೀವನದ ಜೊತೆ ಜೊತೆಗೆ ಕನ್ನಡದ ಮೇಲಿನ ಅಪಾರ ಪ್ರೀತಿಯಿಂದ ಕನ್ನಡ ಸಾಹಿತ್ಯ ಲೋಕಕ್ಕೆ ದುಮುಕಿ "ಕನ್ನಡ ಸಿಂಚಣ" ಎಂಬ ಸಮಗ್ರ ಕರ್ನಾಟಕದ ಮಾಹಿತಿಯೊನ್ನಳಗೊಂಡ ಪುಸ್ತಕವೊಂದನ್ನು ಹೊರತಂದರು ಮತ್ತು ಈ ಪುಸ್ತಕವು ಹಲಾವಾರು ಪ್ರಶಸ್ತಿಗಳನ್ನು ಕೂಡಾ ಗಳಿಸಿದ್ದು ಅವರ ಜ್ಞಾನ ಕಣ–ಜಕ್ಕೆ ಸಾಕ್ಷಿಯಂತಾಗಿವೆ. ಅದು ಅಲ್ಲದೆ ಹಲವಾರು ಪತ್ರಿಕೆಗಳಿಗೆ ಲೇಖನಗಳನ್ನು ಬರೆದು ಓದುಗ ಅಭಿಮಾನಿಗಳನ್ನು ಆಕರ್ಷಿಸಿದ್ದಾರೆ.



ಹಲವಾರು ಕಿರುಚಿತ್ರಗಳ ಕಥೆ–ಚಿತ್ರಕಥ–'–ಸಾಹಿತ್ಯ ರಚಿಸಿ ನೀರ್ದೆಶಿಸಿದ್ದಾರೆ. ಅವರ ಕಿರುಚಿತ್ರವೊಂದನ್ನು ಕನ್ನಡದ ಖ್ಯಾತ ಹಾಸ್ಯನಟ ದೊಡ್ಡಣ್ಣ ಇವರು ಬಿಡುಗಡೆಗೊಳಿಸಿದ್ದು ಗಮನಾರ್ಹ. ಅಂತಾರಾಷ್ಟ್ರ ಮಟ್ಟದ "ಜ್ಞಾನ ವಿಭೂಷಣ" ಅತ್ಯುನ್ನತ ಪ್ರಶಸ್ತಿ, ಡಾ. ಎ. ಪಿ. ಜೆ. ಅಬ್ದುಲ್ ಕಲಾಂ ರಾಷ್ಟ್ರಪ್ರಶಸ್ತಿ, ಹೊಂಗಿರಣ ಸಾಧಕ ಮತ್ತು ಕರ್ನಾಟಕ ಯುವ ಸಾಹಿತ್ಯರತ್ನ ರಾಜ್ಯಪ್ರಶಸ್ತಿಗಳನ್ನು ಪಡೆದು ಕನ್ನಡ ಸಾಹಿತ್ಯ ಲೋಕವನ್ನು ಅಲಂಕ–ರಿಸಿದ್ದಾರೆ. ಅದು ಅಲ್ಲದೆ ಚಂದನವನದ ಚಿತ್ರರಂಗದ ಹಲವಾರು ಮೇರುನಟನಟಿಯರ ಜೊತೆ ಸ್ನೇಹ ಸಂಬಂಧವನ್ನು ಹೊಂದಿದ್ದಾರೆ, ಜೊತೆಜೊತೆಗೆ ರಾಜ್ಯ ರಾಜಕಾರಣದಲ್ಲಿ ತಮ್ಮದೆ ಛಾಪು ಮೂಡಿಸಿರುವ ಗಣ್ಯಾತಿಗಣ್ಯರ ಜೊತೆ ಅತ್ಯುತ್ತಮ



ವ ಡ ನಾ ಟ ವ ನ್ನ ಕೂಡಾ ಹೊಂದಿದ್ದಾರೆ, ಅದರಲ್ಲೂ ವಿಶೇಷವಾಗಿ ಮಾಜಿ ಸಂಸದ ಹಾಗೂ ಬಿ. ಡಿ. ಸಿ. ಸಿ. ಬ್ಯಾಂಕಿನ ಹಾಲಿ ಅಧ್ಯಕ್ಷರು ಆಗಿರುವ ರಮೇಶ ಅಣ್ಣಾ ಕತ್ತಿ ಯವರ ಜೊತೆ ಅವಿನಾಭಾವ ಸಂಬಂಧ ಹೊಂದಿದ್ದು ಅದು ಅಲ್ಲದೆ ಅವರ ಜೊತೆಗೂಡಿ ಬಡವರ ದಿನದಲಿತರ ಕಷ್ಟ–ಕಾರ್ಪಣ್ಯಗಳಲ್ಲಿ ಭಾಗಿಯಾಗಿ ಬಡವರ ಬಾಳಿನಲ್ಲಿ ಬೆಳಕಾಗಿದ್ದಾರೆ.

ಇವುಗಳಷ್ಟೇ ಅಲ್ಲದೆ ಸಾಮಾಜೀಕ ಕಾರ್ಯಗಳಲ್ಲಿ ಭಾಗಿಯಾಗಿ ಸಮಾಜದ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ, ಪರಿಸರ ಸಂರಕ್ಷಣಾ ಕಾರ್ಯದಲ್ಲಿ ತೊಡಗಿಕೊಂಡು ಜನರಲ್ಲಿ ಪರಿಸರ ಪ್ರಜ್ಞೆ ಬೆಳೆಸುತ್ತಿದ್ದಾರೆ, ಇಂತಹ ಅಪರೂಪದ ಅಪರಂಜಿ ಎಂದೆನಿಸಿಕೊಂಡಿರುವ ಕು. ರಾಹುಲ ಅಣ್ಣಾ ಕೊರವ ಇವರು ಇನ್ನಷ್ಟು ಸಾಹಿತ್ಯ ಮತ್ತು ಸಾಮಾಜಿ–ಕ ಕೈಂಕರ್ಯಗಳನ್ನು ಕೈಗೊಳ್ಳಲಿ ಎಂದು ಆಶಿಸುತ್ತಾ ನಮ್ಮ ನಿಮ್ಮೆಲ್ಲರ ಪರವಾಗಿ ಅವರಿಗೆ 24 ನೇ ಹುಟ್ಟು ಹಬ್ಬದ ಹಾರ್ದಿಕ ಶುಭಾಶಯಗಳನ್ನು ಕೋರುತ್ತೇನೆ. ಧನ್ಯವಾದಗಳು.

# ಬೆಳಗಾವಿ: ಸ್ನೇಹಿತರ ಮಧ್ಯೆ ನಡೆದ ಜಗಳ ಕೊಲೆಯಲ್ಲಿ ಅಂತ್ಯ

ಬೆಳಗಾವಿ: ಸ್ನೇಹಿತರ ಮಧ್ಯೆ ನಡೆದ ಜಗಳ ಕೊಲೆಯಲ್ಲಿ ಅಂತ್ಯ ಕಂಡಿರುವ ಘಟನೆ ಚಿಕ್ಕೋಡಿ ತಾಲೂಕಿನ ಹತ್ತರವಾಟ ಗ್ರಾಮದಲ್ಲಿ ನಡೆದಿದೆ.

ಹುಕ್ಕೇರಿ ತಾಲೂಕಿನ ಕೆಸರೂರ ಗ್ರಾಮದ ನಿಂಗಪ್ಪ ಬುಳ್ಳಾರ (25) ಕೊಲೆಯಾದ ವ್ಯಕ್ತಿ. ರುಸ್ತುಂಪೂರ ಗ್ರಾಮದ ಯಲ್ಲಪ್ಪ ಹಾಗೂ ಮಹೇಶ ಆರೋಪಿಗಳು. ಮದ್ಯ ಕುಡಿದ ಮತ್ತಿನಲ್ಲಿ ಮೂವರೂ ಗೆಳೆಯರ ಮಧ್ಯೆ ಜಗಳ ಆರಂಭವಾಗಿದೆ. ಆಗ ಉಳಿದಿಬ್ಬರು ನಿಂಗಪ್ಪ ಅವರನ್ನು ಕೊಲೆ ಮಾಡಿರುವ ಅನುಮಾನ ಇದೆ ಎಂದು ಪೊಲೀಸರು ತಿಳಿಸಿದ್ದಾರೆ. ಕಟ್ಟಡ ಕಾಮಗಾರಿಯೊಂದರ ನಿರ್ಮಾಣ–ಕ್ಕಾಗಿ ಆಗಮಿಸಿದ್ದ ಮೂವರು ಮದ್ಯ ಕುಡಿದು ಗಲಾಟೆ ಮಾಡಿಕೊಂಡಿದ್ದಾರೆ. ಕೊಲೆ ಮಾಡಿದ ಆರೋಪಿಗಳು ಪರಾರಿಯಾಗಿದ್ದು, ಈ ಕುರಿತು ಚಿಕ್ಕೋಡಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಫೆ.27 ರಂದು ರಾಷ್ಟ್ರೀಯ ಜಂತುಹುಳು ನಿವಾರಣಾ ದಿನ

# ಎಲ್ಲ ಅರ್ಹ ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಿ: ಸ್ನೇಹಲ್ ಸುಧಾಕರ ಲೋಖಂಡೆ

ಶಿವಮೊಗ್ಗ: ಮಾರ್ಚ್ 3 ರ ಭಾನುವಾರ ಜಿಲ್ಲೆಯಾದ್ಯಂತ ರಾಷ್ಟ್ರೀಯ ಪಲ್ಸ್ ಪೋಲೀಯೋ ಲಸಿಕಾ ಕಾರ್ಯಕ್ರಮ ಹಮ್ಮಿಕೊಂಡಿದ್ದು 0 ಯಿಂದ 5 ವರ್ಷದೊಳಗಿನ ಎಲ್ಲ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೋ ಲಸಿಕೆ ಹಾಕಿಸಬೇಕೆಂದು ಜಿ.ಪಂ.ಸಿಇಓ ಸ್ನೇಹಲ್ ಸುಧಾಕರ ಲೋಖಂಡೆ ತಿಳಿಸಿದರು.

ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಜಿಲ್ಲಾ ಮಟ್ಟದ ಲಸಿಕಾ ಟಾಸ್ಕ್ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ 0 ಯಿಂದ 5 ವರ್ಷದೊಳಗಿನ 120609 ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದ್ದು, ಯಾವುದೇ ಮಕ್ಕಳು ಲಸಿಕೆಯಿಂದ ಕೈ ಬಿಟ್ಟು ಹೋಗದಂತೆ ಮೈಕ್ರೋ ಪ್ಲಾನ್ ಸಿದ್ದಪಡಿಸಿ ಕಾರ್ಯ ಪ್ರವೃತ್ತರಾಗುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮುಖ್ಯವಾಗಿ ಅತೀ ಸೂಕ್ಷ್ಮ ಪ್ರದೇಶಗಳೆಂದು ಗುರುತಿಸಲ್ಪಡುವ ಕೊಳಚೆ ಪ್ರದೇಶ, ಅಲೆಮಾರಿ ಜನಾಂಗ, ಇಟ್ಟಿ ಭಟ್ಟಿಗಳು, ಕಟ್ಟಡ ನಿರ್ಮಾಣ ಕಾರ್ಮಿಕರ ವಸತಿ ಪ್ರದೇಶಗಳು, ಬಸ್ಸು ನಿಲ್ದಾಣ, ರೈಲ್ವೆ ನಿಲ್ದಾಣಗಳಲ್ಲಿ ಲಸಿಕೆ ನೀಡಬೇಕು. ಸೂಕ್ಷ್ಮ ಪ್ರದೇಶಗಳು, ಪೆರಿ ಅರ್ಬನ್ ಏರಿಯಾಗೆ ಹೆಚ್ಚಿನ ಕಾಳಜಿ ವಹಿಸಬೇಕು.

ಶಿಕ್ಷಣ ಇಲಾಖೆಯವರು ಲಸಿಕಾ ದಿನದಂದು ಶಾಲೆಗಳನ್ನು ತೆರೆದಿರಬೇಕು. ಮೆಸ್ಕಾಂ ನವರು ಫೆ.25 ರಿಂದ ಮಾರ್ಚ್ 06 ರವರೆಗೆ ಅನಿಯಮಿತ ವಿದ್ಯುತ್ ಸರಬರಾಜು ನೀಡಬೇಕು. ಶಾಲಾ ಪ್ರಾರ್ಥನಾ ವೇಳೆ ಪಲ್ಸ್ ಪೋಲಿಯೋ ಲಸಿಕೆ ಕುರಿತು ವಿದ್ಯಾರ್ಥಿಗಳಲ್ಲಿ ಹಾಗೂ ಪೋಷಕರ ಸಭೆಯಲ್ಲಿ ಪೋಷಕರಿಗೆ ಅರಿವು ಮೂಡಿಬೇಕು. ಅಂಗನವಾಡಿ, ಆಶಾ ಕಾರ್ಯಕರ್ತೆಯರು ತಮ್ಮ ಕ್ಷೇತ್ರದಲ್ಲಿ ಅರಿವು ಮೂಡಿಸಬೇಕು ಹಾಗೂ ಗ್ರಾಮೀಣ ಮತ್ತು ನಗರ ಭಾಗದಲ್ಲಿ ಕಸದ ವಾಹನಗಳಲ್ಲಿ ಲಸಿಕೆ ಕುರಿತಾದ ಜಿಂಗಲ್ಸ್ಗಳನ್ನು ಹಾಕಬೇಕು. ಜಿಲ್ಲೆಯಾದ್ಯಂತ ಎಲ್ಲೆಡೆ ಪಲ್ಸ್ ಪೋಲಿಯೋ ಲಸಿಕೆ ಕು–ರಿತು ಮಾಹಿತಿ ಶಿಕ್ಷಣ ಮತ್ತು ಸಂವಹ ಕಾರ್ಯಚಟುವಟಿಕೆಗಳನ್ನು ಕೈಗೊಂಡು ಒಂದು ಮಗವೂ ಲಸಿಕೆಯಿಂದ ವಂಚಿತರಾಗದಂತೆ ಕ್ರಮ ವಹಿಸಬೇಕು. ಸೋಷಿಯಲ್ ಮೀಡಿಯಾ, ದೇವಸ್ಥಾನಗಳು, ಸಾರ್ವಜನಿಕ ಸ್ಥಳಗಳಲ್ಲಿ ಲಸಿಕೆ ಬಗ್ಗೆ ಪ್ರಚಾರ ಮಾಡಬೇಕು ಹಾಗೂ ಇತರೆ ಇಲಾಖೆಗಳು ಸಮನ್ವಯದೊಂದಿಗೆ ಲಸಿಕಾಕರಣವನ್ನು ಶೇ.100 ರಷ್ಟು ಯಶಸ್ವಿಗೊಳಿಸಬೇಕೆಂದು ಸೂಚನೆ ನೀಡಿದರು.



ಆರ್ಸಿಹೆಚ್ ಅಧಿಕಾರಿ ಡಾ.ನಾಗರಾಜನಾಯ್ಕ್ ಮಾತನಾಡಿ, ಅತಿಸೂಕ್ಷ್ಮ ಪ್ರದೇಶಗಳಿಂದ ಹಿಡಿದು ಬಸ್, ರೈಲ್ವೇ ನಿಲ್ದಾಣ ಸೇರಿದಂತೆ ಜಿಲ್ಲೆಯಲ್ಲಿ 1051 ಲಸಿಕಾ ಭೂತ್ ಗಳನ್ನು ತೆರೆದು ಲಸಿಕೆ ಹಾಕಲು ಯೋಜನೆ ರೂಪಿಸಲಾಗಿದೆ. ಆರೋಗ್ಯ ಇಲಾಖೆಯ ಎಲ್ಲ ಸಿಬ್ಬಂದಿಗಳು, ಪ್ರಾ.ಆ.ಸುರಕ್ಷಾ ಅಧಿಕಾರಿಗಳು, ಅಂಗನವಾಡಿ, ಆಶಾ ಕಾರ್ಯಕರ್ತೆಯರು, ರೋಟರಿ, ಲಯನ್ಸ್, ರೆಡ್ಕ್ರಾಸ್ ಸಂಘ ಸಂಸ್ಥೆಗಳ ಪ್ರತಿನಿಧಿಗಳು ವ್ಯಾಕ್ಸಿನೇಟರ್ಗಳಾಗಿ ಕಾರ್ಯ ನಿರ್ವಹಿಸುವರು. ಪ್ರತಿ ತಾಲ್ಲೂಕುಗಳಿಗೆ ನೋಡಲ್ ಅಧಿಕಾರಿ, ಮೇಲ್ವಿಚಾರಕರನ್ನು ನೇಮಿಸಲಾಗಿದೆ, ಸಿಬ್ಬಂದಿಗಳಿಗೆ ತರಬೇತಿ ನೀಡಲಾಗಿದೆ ಎಂದು ತಿಳಿಸಿದರು.

ಡಬ್ಲ್ಯುಹೆಚ್ಓ ಎಸ್ಎಂಓ ಡಾ.ಹರ್ಷಿತ್ ಮಾತನಾಡಿ, ಮಾರ್ಚ್ 3 ರಂದು ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ನಡೆಯಲಿದ್ದು, ಇದಕ್ಕೆ ಪೂರ್ವಭಾವಿಯಾಗಿ ವೈದ್ಯಕೀಯ ಅಧಿಕಾರಿಗಳು, ಮೇಲ್ವಿಚಾರಕರು, ಸಿಬ್ಬಂದಿಗಳಿಗೆ ಜಿಲ್ಲಾ ಮಟ್ಟದ, ಘಟಕ/ಪ್ರಾ.ಆ.ಕೇಂದ್ರ ಮಟ್ಟದ ತರಬೇತಿ ಕಾರ್ಯಾಗಾರ ನಡೆಸಲಾಗಿದೆ. ನಗರ ಮತ್ತು ತಾಲ್ಲೂಕು ಟಾಸ್ಕ್ಫೋರ್ಸ್ ಸಭೆಗಳು ನಡೆಯಲಿವೆ. ಮಾ.4 ಮತ್ತು 5 ರಂದು ಮತ್ತು ನಗರ ಪ್ರದೇಶಗಳಲ್ಲಿ ಮಾ.6 ರಂದು ಬೂತ್ಗಳಲ್ಲಿ ಬಿಟ್ಟು ಹೋದ ಮಕ್ಕಳಿಗೆ ಮನೆ ಮನೆ ಭೇಟಿ ನೀಡಿ ಲಸಿಕೆ ಹಾಕಲಾಗುವುದು.

ಶಿವಮೊಗ್ಗದಲ್ಲಿ ಪೋಲಿಯೋ ಪ್ರಕರಣಗಳು ವರದಿಯಾಗಿಲ್ಲ. ಜಿಲ್ಲೆಯಲ್ಲಿ 103 ಸೂಕ್ಷ್ಮ ಪ್ರದೇಶ ಸೇ–ರಿದಂತೆ 1051 ಬೂತ್ಗಳಲ್ಲಿ ಲಸಿಕೆ ಹಾಕಲು ಗುರುತಿಸಲಾಗಿದೆ. 30 ಮೊಬೈಲ್ ಟೀಂ ಸೇರಿದಂತೆ 2391 ತಂಡಗಳಲ್ಲಿ ಒಟ್ಟು 3919 ಸಿಬ್ಬಂದಿ ಹಾಗೂ 205 ಮೇಲ್ವಿಚಾರಕರು ಕಾರ್ಯ ನಿರ್ವಹಿಸಲಿದ್ದಾರೆ ಎಂದರು.

ಮೀಸಲ್ಸ್ ರುಬೆಲ್ಲಾ :

ಜಿಲ್ಲೆಯಾದ್ಯಂತ ಎಲ್ಲ ಆಸ್ಪತ್ರೆಗಳಲ್ಲಿ ಕಂಡು ಬರುವ ಜ್ವರ ಮತ್ತು ದದ್ದು ಪ್ರಕರಣಗಳನ್ನು ಮೀಸಲ್ಸ್ ರುಬೆಲ್ಲಾ(ದಡಾರ)ಪರೀಕ್ಷೆ ನಡೆಸಿ ವರದಿ ನೀಡಬೇಕು. ಮೀಸಲ್ಸ್ ರುಬೆಲ್ಲಾ ಕು–ರಿತು ಸಮೀಕ್ಷೆಯನ್ನು ನಿಯಮಿತವಾಗಿ ಮಾಡಬೇಕು. ಲಸಿಕೆ ಕುರಿತು ಹೆಚ್ಚಿನ ಅರಿವು ಮೂಡಿಸಬೇಕು. ಹಾಗೂ ಯಾವುದೇ ಮಗು ಮೀಸಲ್ಸ್ ರುಬೆಲ್ಲಾ ಲಸಿಕೆಯಿಂದ ವಂಚಿತವಾಗದಂತೆ ನೋಡಿಕೊಳ್ಳಬೇಕು. ಎರಡೂ ಡೋಸ್ಗಳಲ್ಲಿ ಮಕ್ಕಳು ಡ್ರಾಪ್ ಔಟ್ ಆಗದಂತೆ ಕ್ರಮ ವಹಿಸುವ ಮೂಲಕ ಇದನ್ನು ನಿರ್ಮೂಲನೆಗೊಳಿಸಲು ಎಲ್ಲರೂ ಸಹಕರಿಸಬೇಕು ಎಂದು ಜಿ.ಪಂ ಸಿಇಓ ತಿಳಿಸಿದರು.

ಸಭೆಗೆ ಹಾಜರಾಗದ ಅಧಿಕಾರಿಗಳಿಗೆ ನೋಟಿಸ್ ನೀಡಲು ಸೂಚಿಸಿದ ಅವರು ಮೀಸಲ್ಸ್ ರುಬೆಲ್ಲಾ ಪ್ರಕರಣಗಳಿಗೆ ಸಂಬಂಧಿಸಿದ ಮಾದರಿಗಳನ್ನು ಸಮರ್ಪಕವಾಗಿ ಕಳುಹಿಸಿದ ತಾಲ್ಲೂಕು ವೈದ್ಯಾಧಿಕಾರಿಗಳಿಗೆ ನೋಟಿಸ್ ನೀಡುವಂತೆ ಸೂಚಿಸಿದರು.

ಡಬ್ಲ್ಯುಹೆಚ್ಓ ಎಸ್ಎಂಓ ಡಾ.ಹರ್ಷಿತ್, ಮೊದಲನೇ ಮತ್ತು ಎರಡನೇ ಸುತ್ತಿನ ಮೀಸಲ್ಸ್ ರುಬೆಲ್ಲಾ ಲಸಿಕಾಕರಣದಲ್ಲಿ ಜಿಲ್ಲೆಯು ಶೇ.87 ಪ್ರಗತಿ ಸಾಧಿಸಿದೆ ಎಂದರು.

**ರಾಷ್ಟ್ರೀಯ ಜಂತು ಹುಳು ನಿವಾರಣಾ ದಿನ:**

ಫೆ.27 ರಂದು ಜಿಲ್ಲೆಯಾದ್ಯಂತ ರಾಷ್ಟ್ರೀಯ ಜಂತು ಹುಳು ನಿವಾರಣಾ ದಿನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು 1 ರಿಮದ 19 ವರ್ಷದ ಎಲ್ಲ ಮಕ್ಕಳು ಜಂತು ಹುಳು ನಿವಾರಣಾ ಮಾತ್ರೆ ಆಲ್ಬೆಂಡಜಾಲ್ನ್ನು ಉಚಿತವಾಗಿ ಪಡೆದುಕೊಳ್ಳಬೇಕು ಎಂದು ಜಿ.ಪಂ ಸಿಇಓ ತಿಳಿಸಿದರು.

2023–24 ನೇ ಸಾಲಿನಲ್ಲಿ ಜಿಲ್ಲೆಯ ಒಟ್ಟು 4,52, 072 ಮಕ್ಕಳಿಗೆ ಆಲ್ಬೆಂಡಜಾಲ್ ನೀಡುವ ಗುರಿ ಹೊಂದಲಾಗಿದ್ದು, ಎಲ್ಲ ಅರ್ಹ ಮಕ್ಕಳು ಇದರ ಸದುಪಯೋಗ ಪಡೆಯಬೇಕು. ಹಾಗೂ ಶಿಕ್ಷಕರು ತಮ್ಮ ಮುಂದೆಯೇ ಮಕ್ಕಳು ಮಾತ್ರೆ ತೆಗೆದುಕೊಳ್ಳುವಂತೆ ನೋಡಬೇಕು.

ಜಂತುಹುಳುವಿನಿಂದ ಅಪೌಷ್ಟಿಕತೆ ಸೇರಿಂದತೆ ಅನೇಕ ಆರೋಗ್ಯ ಸಮಸ್ಯೆಗಳು ಎದುರಾಗುವುದ–ರಿಂದ ಮಕ್ಕಳಿಗೆ ಶುಚಿತ್ವದ ಬಗ್ಗೆ, ಕೈ ತೊಳೆಯುವ ಕ್ರಮದ ಬಗ್ಗೆ ಶಾಲೆಗಳಲ್ಲಿ ಪ್ರಾತ್ಯಕ್ಷಿಕೆ ಏರ್ಪಡಿಸಬೇಕು. ಶಿಕ್ಷಕರು ಜಂತು ಹುಳು ನಿವಾರಣಾ ಮಾತ್ರೆ ನೀಡುವ ಬಗ್ಗೆ ಮೇಲ್ವಿಚಾರಣೆ ಕೈಗೊಳ್ಳಬೇಕು ಎಂದರು.

ಆರ್ಸಿಹೆಚ್ ಅಧಿಕಾರಿ ಡಾ.ನಾಗರಾಜ್ ನಾಯ್ಕ್ ಮಾತನಾಡಿ, ಅಂಗನವಾಡಿ, ಶಾಲೆಗಳು, ಪದವಿಪೂರ್ವ ಕಾಲೇಜು, ಐಟಿಐ, ಟೆಕ್ನಿಕಲ್ ಕೋರ್ಸ್ ಕಾಲೇಜುಗಳು,ಪ್ರಥಮ ಬಿಎ, ಮೆಡಿಕಲ್, ಆಯುರ್ವೇದಿಕ್ ಕಾಲೇಜುಗಳಲ್ಲಿ 1 ರಿಂದ 19 ವರ್ಷದ ಮಕ್ಕಳಿಗೆ ಉಚಿತವಾಗಿ ವಿತರಿಸಲಾಗುತ್ತದೆ. ಅಲ್ಲದೆ ಶಾಲೆ ಬಿಟ್ಟ ಮಕ್ಕಳಿಗೆ ಸಂಬಂಧಪಟ್ಟ ಅಂಗನವಾಡಿಗಳಲ್ಲಿ ನೀಡಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಎಲ್ಲ ಜಿಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು, ತಾಲ್ಲೂಕು ವೈದ್ಯಾಧಿಕಾರಿಗಳು, ಡಿಡಿಪಿಐ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು, ಐಎಂಎ, ಸಂಘ ಸಂಸ್ಥೆ ಪದಾಧಿಕಾರಿಗಳು, ಇತರೆ ಅಧಿಕಾ–ರಿಗಳು ಹಾಜರಿದ್ದರು.

## ಮೊರಾರ್ಜಿದೇಸಾಯಿ ವಸತಿ ಶಾಲೆಗಳ 6 ನೇ ತರಗತಿ ಆಂಗ್ಲ ಮಾಧ್ಯಮ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಧಾರವಾಡ: 2024–25 ನೇ ಸಾಲಿಗಾಗಿ ಧಾರವಾಡ ಜಿಲ್ಲೆಯಲ್ಲಿನ 04 ಅಲ್ಪಸಂಖ್ಯಾತರ ಮೊರಾರ್ಜಿದೇಸಾಯಿ ವಸತಿ ಶಾಲೆಗಳ 6 ನೇ ತರಗತಿ ಆಂಗ್ಲ ಮಾಧ್ಯಮ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಸಮುದಾಯದ ಮತ್ತು ಇತರೇ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

5 ನೇ ತರಗತಿ ಪಾಸಾದ ಅಲ್ಪಸಂಖ್ಯಾತ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ ಶೇ.75 ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ (ಒಬಿಸಿ) ಶೇ.25 ಸೀಟು ಲಭ್ಯವಿದೆ. ಜಿಲ್ಲೆಯ ಹುಬ್ಬಳ್ಳಿ ತಾಲ್ಲೂಕು, ಅಂಚಟಗೇರಿ ಗ್ರಾಮದಲ್ಲಿರುವ ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆ ಮತ್ತು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ನಂ.02, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಶಿಂಗನಹಳ್ಳಿ ಧಾರವಾಡ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಹೆಣ್ಣುಮಕ್ಕಳ ವಸತಿ ಶಾಲೆ ಅಂದರಗುಂಚಿ, ಈ ಶಾಲೆಗಳಿಗೆ ಆಸಕ್ತ ವಿದ್ಯಾರ್ಥಿಗಳು ವಸತಿ ಶಾಲೆಗಳ ಪ್ರವೇಶಕ್ಕಾಗಿ ಮಾರ್ಚ್ 15, 2024ರ ವರೆಗೆ ಅರ್ಜಿ ಸಲ್ಲಿಸಬಹುದು.

ಈ ವಸತಿ ಶಾಲೆಗಳಲ್ಲಿ ಉಚಿತ ಊಟ, ವಸತಿ, ಪಠ್ಯಪುಸ್ತಕ, ಲೇಖನ ಸಾಮಗ್ರಿ, ಸಮವಸ್ತ್ರಗಳೊಂದಿಗೆ ಇನ್ನಿತರೇ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುವುದು. ಪ್ರವೇಶ ಬಯಸುವ ಅಲ್ಪಸಂಖ್ಯಾತರ ಮತ್ತು ಇತರೇ ಪ್ರವರ್ಗಗಳ ಆಸಕ್ತ ವಿದ್ಯಾರ್ಥಿಗಳು ಸಂಬಂಧಿಸಿದ ಸೇವಾಸಿಂಧು ಪೋರ್ಟಲ್ ವೈಬ್ಸೈಟ್ ಲಿಂಕ್ **https://sevasindhuservices.karnataka.gov.in** ಮೂಲಕ ಆನ್ಲೈನ್ ಅರ್ಜಿಗಳನ್ನು ಸಲ್ಲಿಸಿಬಹುದು ಉಚಿತ ಸೇವೆ ಪಡೆಯಲು ಸಮೀಪದ ಜಿಲ್ಲಾ ಅಲ್ಪಸಂಖ್ಯಾತರ ಕಚೇರಿ ಅಥವಾ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಅಥವಾ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಿಗೆ ಭೇಟಿ ನೀಡಬಹುದು.

ಹೆಚ್ಚಿನ ವಿವರಗಳಿಗಾಗಿ ಕೇಂದ್ರ ಕಛೇರಿ ಸಹಾಯವಾಣಿ: 8277799990, ಜಿಲ್ಲಾ ಕಚೇರಿ ಸಹಾಯವಾಣಿ ಧಾರವಾಡ –0836–2971590, ಡಾ.ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆ ಅಂಚಟಗೇರಿ –8618429474, ಪ್ರಾಂಶುಪಾಲರು, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ನಂ.02 ಅಂಚಟಗೇರಿ – 9448054139, ಪ್ರಾಂಶುಪಾಲರು, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಧಾರವಾಡ ಗ್ರಾಮೀಣ– 8497847789, ಪ್ರಾಂಶುಪಾಲರು,ಅಸಂಹೆಣ್ಣುಮಕ್ಕಳ ವಸತಿ ಶಾಲೆ ಧಾರವಾಡ–9448054139, ತಾಲ್ಲೂಕು, ವಿಸ್ತರಣಾಧಿಕಾರಿಗಳ ಕಚೇರಿ ಧಾರವಾಡ–0836–2971590, ಹುಬ್ಬಳ್ಳಿ – 0836–2244261, 9632521972, ಅಲ್ಪಸಂಖ್ಯಾತರ ತಾಲ್ಲೂಕಾ ಮಾಹಿತಿ ಕೇಂದ್ರ ಧಾರವಾಡ.–9738287549, ಹುಬ್ಬಳ್ಳಿ–8867718261, ನವಲಗುಂದ–8746894524, ಕಲಘಟಗಿ–8951674107, ಕುಂದಗೋಳ–8904661872 ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಗೋಪಾಲ.ಎಚ್.ಲಮಾಣಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾಧಿಕಾರಿಗಳಿಂದ ಮಾದನಭಾವಿ ಸರಕಾರಿ ಗೋಶಾಲೆಗೆ ಭೇಟಿ; ತಾಲೂಕಿಗೊಂದು ಮೇವು ಬ್ಯಾಂಕ್ ಆರಂಭಕ್ಕೆ ವಾರದಲ್ಲಿ ಸಿದ್ಧತೆ

# ಜಿಲ್ಲೆಯಲ್ಲಿ 1,38,492 ಟನ್ ಮೇವು ದಾಸ್ತಾನು ಲಭ್ಯ: ಜಿಲ್ಲಾಧಿಕಾರಿ ದಿವ್ಯ ಪ್ರಭು

ಧಾರವಾಡ: ಬರಗಾಲದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಅಗತ್ಯ ಕುಡಿಯುವ ನೀರು, ಜನ ಜಾನುವಾರುಗಳಿಗೆ ಮೇವು ಮತ್ತು ಜನರ ಬೇಡಿಕೆಗೆ ಅನುಗುಣವಾಗಿ ಉದ್ಯೋಗ ನೀಡಲು ಜಿಲ್ಲಾಡಳಿತ ಅಗತ್ಯವಾದ ಕ್ರಮಕೈಗೊಂಡಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.



ಅವರು ಧಾರವಾಡ ತಾಲೂಕಿನ ಮಾದನಭಾವಿ ಗ್ರಾಮದಲ್ಲಿ ಸ್ಥಾಪಿಸಿರುವ ಸರಕಾರಿ ಗೋಶಾಲೆಗೆ ಭೇಟಿ ನೀಡಿ, ಮಾತನಾಡಿದರು.

20ನೇ ಜಾನುವಾರು ಗಣತಿ ಪ್ರಕಾರ ಜಿಲ್ಲೆಯಲ್ಲಿ 2,33,461 ದೊಡ್ಡ ಮತ್ತು 1,53,938 ಸಣ್ಣ ಪ್ರಾಣಿಗಳು ಸೇರಿ ಒಟ್ಟು 3,87,399 ಪ್ರಾಣಿಗಳಿವೆ. ಸಣ್ಣ ಮತ್ತು ದೊಡ್ಡ ಪ್ರಾಣಿಗಳಿಗೆ ಅನುಗುಣವಾಗಿ ಅಂದಾಜು ಪ್ರತಿದಿನ ಆರು ಕೆಜಿಯಂತೆ ಪ್ರತಿ ವಾರಕ್ಕೆ ಸರಾಸರಿ 10.261 ಟನ್ ಮೇವು ಬೇಕಾಗುತ್ತದೆ. ಕೆಲವು ರೈತರು ಮುಂಗಾರಿನಲ್ಲಿ ಮತ್ತು ಹಿಂಗಾರಿನಲ್ಲಿ ಸ್ವಂತ ಮೇವು ಸಂಗ್ರಹ ಹೊಂದಿದ್ದಾರೆ. ಆದರೂ ಜಿಲ್ಲಾಡಳಿತದಿಂದ ಮೇವು ಪೂರೈಕೆಗೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು.

**ಜಿಲ್ಲೆಯಲ್ಲಿ 1,38,492 ಮೇವು ದಾಸ್ತಾನು:** ಪ್ರಸ್ತುತ ನಮ್ಮ ಜಿಲ್ಲೆಯಲ್ಲಿ ಮುಂದಿನ 12 ರಿಂದ 13 ವಾರಕ್ಕೆ ಬೇಕಾಗುವಷ್ಟು ಸುಮಾರು 1,38,492 ಟನ್ ಮೇವು ದಾಸ್ತಾನು ಇದೆ. ರೈತರ ಬೇಡಿಕೆಗೆ ಅನುಗುಣವಾಗಿ ಪೂರೈಸಲಾಗುತ್ತದೆ. ಶೀಘ್ರದಲ್ಲಿ ಹುಬ್ಬಳ್ಳಿ ತಾಲೂಕಿನ ಶೇರೆವಾಡ ಮತ್ತು ಶಿರಗುಪ್ಪಿಯಲ್ಲಿ ಮೇವು ಬ್ಯಾಂಕ್ ಆರಂಭಿಸಲು ಸಿದ್ಧತೆ ಮಾಡಲಾಗಿದೆ. ಫೆಬ್ರವರಿ ತಿಂಗಳ ಅಂತ್ಯದೊಳಗೆ ರೈತರ ಬೇಡಿಕೆಗೆ ಅನುಗುಣವಾಗಿ ಪ್ರತಿ ತಾಲೂಕಿಗೆ ಒಂದು ಮೇವು ಬ್ಯಾಂಕ್ ಆರಂಭಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

**ಅಗತ್ಯವಿದಲ್ಲಿ ಗೋಶಾಲೆ ಆರಂಭಕ್ಕೂ ಕ್ರಮ:** ಜಿಲ್ಲೆಯ ಮಾದನಭಾವಿಯಲ್ಲಿ ಕಳೆದ ಒಂದು ವರ್ಷದ ಹಿಂದೆ ಸರಕಾರಿ ಗೋಶಾಲೆ ಆರಂಭಿಸಲಾಗಿದೆ. ಈ ಗೋಶಾಲೆಯಲ್ಲಿ ಈಗಾಗಲೇ ಸುಮಾರು 15ಕ್ಕೂ ಹೆಚ್ಚು ಆಕಳು, ಕರು ಮತ್ತು 17ಕ್ಕೂ ಹೆಚ್ಚು ಎಮ್ಮೆ ಹಾಗೂ ಕರುಗಳಿವೆ. ರೈತರು ತಮಗೆ ಪಶುಪಾಲನೆಗೆ ತೊಂದರೆ, ಅನಾನುಕೂಲವಿದ್ದಲ್ಲಿ ತಮ್ಮ ಹಸುಗಳನ್ನು ಈ ಗೋಶಾಲೆಗೆ ನೀಡಹುದು.

ಸುಮಾರು 1 ಸಾವಿರ ದನಗಳಿರುವ ಖಾಸಗಿಯಾಗಿ 10 ಗೋಶಾಲೆಗಳು ಜಿಲ್ಲೆಯಲ್ಲಿವೆ. ಇವುಗಳಿಗೆ ಪುಣ್ಯಕೋಟಿ ಹಾಗೂ ಪಿಂಜಾರ ಪೋಳ ಯೋಜನೆಗಳಡಿ ಸರಕಾರದ ಸಹಾಯಧನ ಹಾಗೂ ದಾನಿಗಳ ನೇರವು ನೀಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಈಗಾಗಲೇ ಜಿಲ್ಲೆಯಲ್ಲಿ ಜೂನ್ ತಿಂಗಳವರೆಗೂ ಅಗತ್ಯವಿರುವಷ್ಟು ಮೇವು ದಾಸ್ತಾನು ಹೊಂದಲಾಗಿದೆ. ಹಿಂಗಾರಿನ ಮೇವು ಸಹ ರೈತರಿಗೆ ಸೀಗುತ್ತದೆ. ಮೇವು ಪೂರೈಕೆಗಾಗಿ ಟೆಂಡರ್ ಕರೆದು ಪೂರೈಕೆದಾರರಿಗೆ ಕಾರ್ಯಾದೇಶ ನೀಡಲಾಗಿದೆ. ಮತ್ತು ಮೇವು ಬೇಡಿಕೆ ಬರಬಹುದಾದ ಹೋಬಳಿಗಳನ್ನು ಗುರುತಿಸಲಾಗಿದ್ದು, ಅಗತ್ಯವಿದ್ದಲ್ಲಿ ಮೇವು ಬ್ಯಾಂಕ್ ತೆರಯಲು ಕ್ರಮಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

**39 ಸಾವಿರ ಪಾಕೆಟ್ ವಿವಿಧ ಬೆಳೆಗಳ ಬೀಜ ವಿತರಣೆ:** ಜಿಲ್ಲೆಯ ಎಲ್ಲ ತಾಲೂಕಿನಲ್ಲಿ ನೀರಾವರಿ ಅನುಕೂಲವಿರುವ ಮತ್ತು ಮೇವು ಬೆಳೆಯಲು ಆಸಕ್ತಿ ಇರುವ ರೈತರಿಗೆ ಇಲ್ಲಿವರೆಗೆ ವಿವಿಧ ಬೆಳೆಗಳ 39 ಸಾವಿರ ಬೀಜದ ಪಾಕೆಟ್ಗಳನ್ನು ರೈತರಿಗೆ ಉಚಿತವಾಗಿ ವಿತರಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಪಶುಪಾಲನೆ ಮತ್ತು ಪಶು ವೈದ್ಯಕೀಯ ಇಲಾಖೆ ಉಪನಿರ್ದೇಶಕ ಡಾ.ರವಿ ಸಾಲಿಗೌಡರ, ಸಹಾಯಕ ನಿರ್ದೇಶಕ ಡಾ.ಪ್ರಕಾಶ ಬೆನ್ನೂರ, ಡಾ. ಸುರೇಶ ಅರಕೇರಿ ಹಾಗೂ ಗೋಶಾಲೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಸಾರ್ವಜನಿಕರ ಕುಂದು ಕೊರತೆ ಅರ್ಜಿ ಸ್ವೀಕಾರ

ಶಿವಮೊಗ್ಗ: ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗದ ಜಿಲ್ಲಾ ಅಧಿಕಾರಿಗಳು ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಫೆಬ್ರವರಿ–2024ರ ಮಾಹೆಯ ಕೆಳಕಂಡ ದಿನಗಳಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 12.30ರವರೆಗೆ ಸಾರ್ವಜನಿಕರ ಕುಂದು ಕೊರತೆ ಅರ್ಜಿ ಸ್ವೀಕಾರ ಸಭೆ ನಡೆಸುವರು.

ಫೆ. 26 ರಂದು ಭದ್ರಾವತಿ ತಾಲೂಕು ಪಂಚಾಯತ್ ಸಭಾಂಗಣ ಮತ್ತು ತೀರ್ಥಹಳ್ಳಿ ತಾಲೂಕು ಕಚೇರಿ ಸಭಾಂಗಣ, ಫೆ. 27 ರಂದು ಸಾಗರ ತಾಲೂಕು ಪಂಚಾಯಿತಿ ಸಭಾಂಗಣ ಮತ್ತು ಹೊಸನಗರ ತಾಲೂಕು ಕಚೇರಿ ಸಭಾಂಗಣ, ಫೆ. 28 ರಂದು ಸೊರಬ ತಾಲೂಕು ಕಚೇರಿ ಸಭಾಂಗಣ ಮತ್ತು ಶಿಕಾರಿಪುರ ತಾಲೂಕು ಕಚೇರಿ ಸಭಾಂಗಣ ಹಾಗೂ ಫೆ.29 ರಂದು ಶಿವಮೊಗ್ಗ ತಾಲೂಕು ಪಂಚಾಯತ್ ಸಭಾಂಗಣಗಳಲ್ಲಿ ಸಭೆ ನಡೆಯಲಿದೆ.

ಸರ್ಕಾರಿ ಕರ್ತವ್ಯ ನಿರ್ವಹಿಸಲು ಬೇಜವಾಬ್ದಾರಿತನ, ನಿರ್ಲಕ್ಷ್ಯ, ಅನಗತ್ಯ ವಿಳಂಬ ಮತ್ತು ಅಧಿಕೃತ ಕೆಲಸಕ್ಕಾಗಿ ಲಂಚಕ್ಕೆ ಬೇಡಿಕೆ ಇಟ್ಟಂತಹ ಅಧಿಕಾರಿ ಹಾಗೂ ಸಿಬ್ಬಂದಿಗಳ ವಿರುದ್ಧ ಸಾರ್ವಜನಿಕರು ಲಿಖಿತ ಅಹವಾಲು ಸಲ್ಲಿಸುವಂತೆ ಶಿವಮೊಗ್ಗದ ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ತಿಳಿಸಿದ್ದಾರೆ.

# ಸತತ ಅಧ್ಯಯನ, ವೃತ್ತಿ ನೈಪುಣ್ಯತೆ ಬೆಳೆಸಿಕೊಳ್ಳಲು ಮುಖ್ಯ ನ್ಯಾಯಮೂರ್ತಿ ಕರೆ: ಮುಖ್ಯ ನ್ಯಾಯಮೂರ್ತಿ ಪಿ.ಎಸ್.ದಿನೇಶ ಕುಮಾರ

ಧಾರವಾಡ: ಸತತ ಅಧ್ಯಯನ, ವೃತ್ತಿ ನೈಪುಣ್ಯತೆ ಮೈಗೂಡಿಸಿ ಕೊಂಡು ನ್ಯಾಯವಿತರಣಾ ಪ್ರಕ್ರಿಯೆಯಲ್ಲಿ ನ್ಯಾಯಾಂಗ ದೊಂದಿಗೆ ಸಹಕರಿಸಿ, ಪ್ರಜಾಪ್ರಭುತ್ವದ ಸಾರ್ವಭೌಮತ್ವವನ್ನು ಎತ್ತಿ ಹಿಡಿಯಲು ನ್ಯಾಯವಾದಿಗಳು ಸಹಕರಿಸಬೇಕು ಎಂದು ರಾಜ್ಯದ ಮುಖ್ಯ ನ್ಯಾಯಮೂರ್ತಿ ಪಿ.ಎಸ್. ದಿನೇಶಕುಮಾರ ಹೇಳಿದರು.




ಅವರು ಹೈಕೋರ್ಟ ಪೀಠ ವಕೀಲರ ಸಂಘ ಧಾರವಾಡ ವತಿಯಿಂದ ಸಂಘದ ಸಭಾಭವನದಲ್ಲಿ ಫೆ.19 ಮಧ್ಯಾಹ್ನ ಹಮ್ಮಿಕೊಂಡಿದ್ದ ಸನ್ಮಾನವನ್ನು ಸ್ವೀಕರಿಸಿ, ಮಾತನಾಡಿದರು.

1990ರಲ್ಲಿ ವಕೀಲಿ ವೃತ್ತಿಗೆ ಸೇರಿದ ನಾನು ನಂತರ ನ್ಯಾಯ ಮೂರ್ತಿಯಾಗಿ ಹಲವಾರು ಬಾರಿ ಇದೇ ಧಾರವಾಡ ಪೀಠದಲ್ಲಿ ಕಾರ್ಯನಿರ್ವಹಿಸಿದ್ದೇನೆ. ಈಗ ಮುಖ್ಯ ನ್ಯಾಯಮೂರ್ತಿಯಾಗಿ ಸೇವೆ ಸಲ್ಲಿಸುವ ಅವಕಾಶ ಪ್ರಾಪ್ತಿಯಾಗಿದೆ. ಈ ಹಿನ್ನಲೆಯಲ್ಲಿ ತಾವು ಹೇಳಿದ ಪ್ರೀತಿ ಗೌರವದ ಸನ್ಮಾನದಿಂದ ನನಗೆ ಹೃದಯ ತುಂಬಿ ಬಂದಿದೆ ಎಂದು ಭಾವ ತುಂಬಿ ನುಡಿದರು.

ಧಾರವಾಡ ಹೈಕೋರ್ಟ ಪೀಠ ವಕೀಲರ ಸಂಘದ ಪರವಾಗಿ ಮುಖ್ಯ ನ್ಯಾಯಮೂರ್ತಿಗಳು ಹಾಗೂ ಅವರ ಧರ್ಮ ಪತ್ನಿ ಜಯಶ್ರೀ. ಪಿ.ಎಸ್.ದಿನೇಶಕುಮಾರ ಅವರಿಗೆ ಕನ್ನಡ ನಾಡಿನ ನಾಯಕ ವಿಶ್ವಗುರು ಬಸವಣ್ಣನವರ ಪ್ರತಿಮೆಯೊಂದಿಗೆ ಫಲಪುಷ್ಪ ನೀಡಿ, ಸನ್ಮಾನಿಸಲಾಯಿತು. ಮತ್ತು ಈ ಸಂದರ್ಭದಲ್ಲಿ ಧಾರವಾಡ ಹೈಕೋರ್ಟ ಪೀಠದ ಎಲ್ಲ ಗೌರವಾನ್ವಿತ ನ್ಯಾಯಮೂರ್ತಿಗಳು ಉಪಸ್ಥಿತರಿದ್ದರು.

ಪ್ರಾರಂಭದಲ್ಲಿ ಸಂಘದ ಅಧ್ಯಕ್ಷರಾದ ವ್ಹಿ.ಎಂ.ಶೀಲವಂತ ಎಲ್ಲರನ್ನೂ ಸ್ವಾಗತಿಸಿದರು. ಕಾರ್ಯಕಾರಿ ಮಂಡಳಿ ಸದಸ್ಯ ಕೆ.ಎಸ್.ಕೋರಿಶೆಟ್ಟರ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

ವೇದಿಕೆಯಲ್ಲಿದ್ದ ಹಿರಿಯ ನ್ಯಾಯ ಮೂರ್ತಿ ಎಸ್.ಜಿ.ಪಂಡಿತ್ ಸೇರಿದಂತೆ ಮಾನ್ಯ ಎಲ್ಲ ನ್ಯಾಯ ಮೂರ್ತಿಗಳನ್ನು ಸಮಿತಿಯ ಉಪಾಧ್ಯಕ್ಷ ಸಂತೋಷ ಮಲಗೌಡರ, ಪ್ರಧಾನ ಕಾರ್ಯದರ್ಶಿ ಆನಂದ ಆರ್.ಕೊಳ್ಳಿ, ಮಹಿಳಾ ಪ್ರತಿನಿಧಿ ಪೂಜಾ ಸವದತ್ತಿ ಹಾಗೂ ಸಮಿತಿಯ ಸದಸ್ಯರಾದ ದೀಪಾ ದೊಡ್ಡಟ್ಟಿ, ಮನೋಜ ಬಿಕ್ಕಣ್ಣವರ, ಮಹಾಂತೇಶ ಹಿರೇಮಠ, ಗಾಯತ್ರಿ ಎಸ್.ಆರ್. ಅವರು ಸನ್ಮಾನಿಸಿ ಗೌರವಿಸಿದರು.

ಇತ್ತೀಚಿಗೆ ನಡೆದ ಸಂಘ ಆಯೋಜಿಸಿದ ಕ್ರೀಡೆಗಳಲ್ಲಿ ವಿಜೇತರಾದವರಿಗೆ ಮುಖ್ಯ ನ್ಯಾಯ ಮೂರ್ತಿಗಳು ಬಹುಮಾನ ವಿತರಿಸಿದರು. ಬಹುಮಾನ ವಿತರಣಾ ಕಾರ್ಯಕ್ರಮವನ್ನು ಸಂಘದ ಕೋಶಾಧ್ಯಕ್ಷ ಶಿವರಾಜ ಬೆಳ್ಳಕ್ಕಿ ನಡೆಸಿಕೊಟ್ಟರು.




## ಕುಡುಮಲ್ಲಿಗೆಯಲ್ಲಿ ಸಂವಿಧಾನ ಜಾಗೃತಿ ಜಾಥಾ

ಶಿವಮೊಗ್ಗ: ತೀರ್ಥಹಳ್ಳಿ ತಾಲ್ಲೂಕು ಕುಡುಮಲ್ಲಿಗೆ ಗ್ರಾಮ ಪಂಚಾಯಿತಿಗೆ ಆಗಮಿಸಿದ ಸಂವಿಧಾನ ಜಾಥಾವನ್ನು ಮಹಿಳೆಯರ ಪೂರ್ಣಕುಂಭ, ಬೈಕ್ ರ್ಯಾಲಿ, ವಿದ್ಯಾರ್ಥಿಗಳ ಬಲೂನ್ ಜಾಥಾ ಹಾಗೂ ಮಕ್ಕಳ ಪಥ ಸಂಚಲನದ ಮೂಲಕ ಬರಮಾಡಿಕೊಳ್ಳಲಾಯಿತು.

ಗ್ರಾಮ ಪಂಚಾಯತ್ ಅಧ್ಯಕ್ಷ ರಾಜೇಶ್ ಬಿ.ಎಂ ಕಾರ್ಯಕ್ರಮ ಉದ್ಘಾಟಿಸಿದರು.

ಸಂವಿಧಾನ ಪೀಠಿಕೆಯನ್ನು ಸುಜಾತ ರವರು ವಾಚಿಸಿದರು. ಉಪಾಧ್ಯಕ್ಷರು ,ಚುನಾಯಿತ ಪ್ರತಿನಿಧಿಗಳು ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಪಂಚಾಯ್ತಿ ಕಾರ್ಯದರ್ಶಿಗಳು ಹಾಜರಿದ್ದರು.

ಸಂವಿಧಾನ ಜಾಥಾ ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಗೆ ಆಯೋಜಿಸಲಾಗಿದ್ದ ಪ್ರಬಂಧ ಸ್ಪರ್ಧೆ ಹಾಗೂ ಚಿತ್ರಕಲಾ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಿಸಲಾಯಿತು ಮತ್ತು ಶಾಲಾ ಮಕ್ಕಳಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

## ರಜತ ಮಹೋತ್ಸವ ಕಾರ್ಯಕ್ರಮ



ಚಿತ್ರದುರ್ಗ : ಕೋಟೆ ನಾಡು ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮುರು ತಾಲೂಕಿನ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಶಾಖಾಮಠ ಸಿದ್ದಯ್ಯನಕೋಟೆಯಲ್ಲಿ ಚಿತ್ತರಗಿ ಸಾಂಸ್ಕೃತಿಕ ಕಾಲವೇದಿಕೆ ಮತ್ತು ಕ್ರೀಡಾ ಯುವಕ ಸಂಘ (ರಿ.) ವತಿಯಿಂದ ಆಯೋಜಿಸಲಾಗಿದ್ದ ನಿರಂಜನ ಪಟ್ಟಾಧಿಕಾರ ರಜತ ಮಹೋತ್ಸವ ಕಾರ್ಯಕ್ರಮದಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷರು ಹಾಗೂ ಮಾಜಿ ಸಂಸದರಾದ ಶ್ರೀ ಬಿ.ಎನ್. ಚಂದ್ರಪ್ಪ ರವರು ಮತ್ತು ಕೆಪಿಸಿಸಿ ಉಪಾಧ್ಯಕ್ಷರು ಹಾಗೂ ಮಾಜಿ ಸಚಿವರಾದ ಶ್ರೀ ಹೆಚ್.ಆಂಜನೇಯ ರವರು ಭಾಗವಹಿಸಿ, ಶ್ರೀಗಳ ಆಶೀರ್ವಾದವನ್ನು ಪಡೆದು, ಮಾತನಾಡಿದರು.

ಕಾರ್ಯಕ್ರಮದಲ್ಲಿ ಪರಮಪೂಜ್ಯ ಶ್ರೀ ಮ.ನಿ.ಪ್ರ ಬಸವಲಿಂಗ ಮಹಾಸ್ವಾಮಿಗಳು ಸೇರಿದಂತೆ ಅನೇಕ ಮಠದ ಶ್ರೀಗಳು, ಜಿಲ್ಲಾ ಕಾಂಗ್ರೆಸ್ ಎಸ್.ಸಿ ಘಟಕದ ಅಧ್ಯಕ್ಷರಾದ ಶ್ರೀ ಜಯಣ್ಣ ರವರು, ಗ್ರಾಮೀಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಶ್ರೀ ನಾಗೇಶ್ ರೆಡ್ಡಿ ರವರು, ನಾಯಕನಹಟ್ಟಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀ ಓಬಣ್ಣ ರವರು, ಜಿಲ್ಲಾ ಕಾಂಗ್ರೆಸ್ ಓ.ಬಿ.ಸಿ ಘಟಕದ ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಜಗದೀಶ್ ರವರು, ಕಾಂಗ್ರೆಸ್ ಪಕ್ಷದ ಮುಖಂಡರಾದ ಶ್ರೀ ರಾಜು ಮಂಜಕ್ಕ ರವರು, ಶ್ರೀ ಶರತ್ ರವರು, ಶ್ರೀ ಇಮ್ರಾನ್ ರವರು ಸೇರಿದಂತೆ ಅನೇಕ ಮುಖಂಡರು, ಸ್ಥಳೀಯ ಭಾಗವಹಿಸಿದರು.

# ಸಂವಿಧಾನ ಜಾಗೃತಿ ಜಾಥಾ: ಸಂಡೂರು ವ್ಯಾಪ್ತಿಯಲ್ಲಿ ಸಂಚಾರ

ಬಳ್ಳಾರಿ: ಜಿಲ್ಲೆಯಲ್ಲಿ ಸಂಚರಿಸುತ್ತಿರುವ ಸಂವಿಧಾನ ಜಾಗೃತಿ ಜಾಥಾವು ಶನಿವಾರದಂದು ಸಂಡೂರು ತಾಲ್ಲೂಕಿನ ತೋರಣಗಲ್ಲು, ವಡ್ಡು ಹಾಗೂ ತಾಳೂರು ಗ್ರಾಮ ಪಂಚಾಯಿತಿ ಹಾಗೂ ಕುರೇಕುಪ್ಪ ಪುರಸಭೆ ವ್ಯಾಪ್ತಿಯಲ್ಲಿ ಸಂಚಾರ ನಡೆಸಿತು.




ಜಾಥಾವನ್ನು ತೋರಣಗಲ್ಲು ಗ್ರಾಮದಲ್ಲಿ ವೇಷ ಭೂಷಣ ಧರಿಸಿದ ವಿದ್ಯಾರ್ಥಿಗಳು, ಡೊಳ್ಳು ಕುಣಿತ, ನಂದಿ ಕೋಲು, ಹಲಗೆ ವಾದನ, ತಾಷಾ, ರಾಷ್ಟ್ರ ಧ್ವಜ ಮತ್ತು ನೀಲಿ ಧ್ವಜ ಹಿಡಿದ ಜನರು ಹಾಗೂ ಕಳಶ ಮತ್ತು ಪೂರ್ಣ ಕುಂಭ ಹೊತ್ತ ಮಹಿಳೆಯರ ಸಮ್ಮುಖದಲ್ಲಿ ಸಂಡೂರು ಶಾಸಕ ಈ.ತುಕರಾಂ ಅವರು ಅದ್ದೂರಿಯಾಗಿ ಸ್ವಾಗತಿಸಿ, ಜಾಥಾ ಮೆರವಣಿಗೆಗೆ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ನಮ್ಮ ಸಂವಿಧಾನವು ಹುಟ್ಟಿನಿಂದ ಸಾಯುವವರೆಗೆ ನಮಗೆಲ್ಲರಿಗೂ ಎಲ್ಲಾ ಸೌಲಭ್ಯಗಳನ್ನು ಕೊಟ್ಟಿದೆ ಎಂದರು.

ಸಂವಿಧಾನವು ಮಹತ್ವದ್ದಾಗಿದ್ದು ನಾವೆಲ್ಲರೂ ಸಂವಿಧಾನದ ಮೌಲ್ಯಗಳನ್ನು ಅರಿಯಬೇಕು. ಆ ಮೂಲಕ ನಮ್ಮ ರಾಜ್ಯ ಹಾಗೂ ದೇಶವನ್ನು ಪ್ರಗತಿ ಪಥದತ್ತ ಕೊಂಡೊಯ್ಯಬಹುದು ಎಂದು ಅಭಿಪ್ರಾಯಪಟ್ಟರು.

ಇದೇ ಸಂದರ್ಭದಲ್ಲಿ ಸಂವಿಧಾನದ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಅವರ ನುಡಿಮುತ್ತುಗಳನ್ನು ಉದ್ಘೋಷಿಸಿದರು. ಸಾರ್ವಜನಿಕರಿಗೆ ಸಂವಿಧಾನದ ಪ್ರಸ್ತಾವನೆಯನ್ನು ಬೋಧಿಸಿದರು.

ಈ ವೇಳೆ ತಹಶೀಲ್ದಾರ ಅನೀಲ್ ಕುಮಾರ್, ತಾಲ್ಲೂಕು ಪಂಚಾಯಿತಿ ಇಒ ಷಡಕ್ಷರಯ್ಯ ಸೇರಿದಂತೆ ಜನಪ್ರತಿನಿಧಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

ಕುರೇಕುಪ್ಪ ಗ್ರಾಮ:

ಕುರೇಕುಪ್ಪ ಗ್ರಾಮದಲ್ಲಿ ಗ್ರಾಮಸ್ಥರ ಸಮ್ಮುಖದಲ್ಲಿ ಜಾಥಾವನ್ನು ವಿಶೇಷವಾಗಿ ಸ್ವಾಗತಿಸಲಾಯಿತು. ಮಾನವ ಹಕ್ಕುಗಳ ಸಂಘಟನೆಯ ಜಿಲ್ಲಾಧ್ಯಕ್ಷ ಮಲಿಯಪ್ಪ ಮಾತನಾಡಿ, ಸಂವಿಧಾನವನ್ನು ಕಾಪಾಡುವ ಜವಾಬ್ದಾರಿ ಪ್ರತಿಯೊಬ್ಬ ಭಾರತೀಯರ ಮೇಲೆ ಇದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜನಪ್ರತಿನಿಧಿಗಳು, ಡಿ.ಎಸ್.ಎಸ್. ಮುಖಂಡರಾದ ನಾಗರಾಜ, ಈರಣ್ಣ, ಕಸ್ತೂರಿ ಮಂಜುನಾಥ ಪಾಲ್ಗೊಂಡಿದ್ದರು. ಬಸವಪುರದಿಂದ ವಡ್ಡು ಗ್ರಾಮದವರೆಗೆ ಬೈಕ್ ರ್ಯಾಲಿ ನಡೆಯಿತು.

ಜಾಥಾದಲ್ಲಿ ಸಂವಿಧಾನದ ಆಶಯ ಮತ್ತು ಮೌಲ್ಯಗಳನ್ನು ಕುರಿತು ಸಾರ್ವಜನಿಕರಲ್ಲಿ ಜಾಗೃತಿಯನ್ನು ಮೂಡಿಸಿ, ಸಂವಿಧಾನ ರಚನಾ ಸಭೆ ಹಾಗೂ ಸಂವಿಧಾನದ ಕುರಿತ ವೀಡಿಯೋ ತುಣುಕುಗಳನ್ನು ಸಾರ್ವಜನಿಕರಿಗೆ ಪ್ರದರ್ಶಿಸಲಾಯಿತು ಮತ್ತು ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಲಾಯಿತು.

# ಸಂವಿಧಾನ ಜಾಗೃತಿ ಜಾಥಾ: ಸಂಡೂರು ವ್ಯಾಪ್ತಿಯಲ್ಲಿ ವಿವಿಧೆಡೆ ಸಂಭ್ರಮದ ಸ್ವಾಗತ

ಬಳ್ಳಾರಿ: ಸಂಡೂರು ತಾಲ್ಲೂಕಿನ ಬನ್ನಿಹಟ್ಟಿ, ಯು.ರಾಜಾಪುರ, ಅಂತಾಪುರ, ವಿಠ್ಠಲಾಪುರ ಹಾಗೂ ಮೆಟ್ರಿಕಿ ಗ್ರಾಮ ಪಂಚಾಯಿತಿಗಳ ಮಾರ್ಗದಲ್ಲಿ ಭಾನುವಾರ ಸಂವಿಧಾನ ಜಾಗೃತಿ ಜಾಥಾವು ಸಂಚರಿಸಿತು.

ಜಾಥಾದಲ್ಲಿ ಸಂವಿಧಾನದ ಆಶಯ ಮತ್ತು ಮೌಲ್ಯಗಳನ್ನು ಕುರಿತು ಸಾರ್ವಜನಿಕರಲ್ಲಿ ಜಾಗೃತಿಯನ್ನು ಮೂಡಿಸಿ, ಸಂವಿಧಾನ ರಚನಾ ಸಭೆ ಹಾಗೂ ಸಂವಿಧಾನದ ಕುರಿತ ವಿಡಿಯೋ ತುಣುಕುಗಳನ್ನು ಸಾರ್ವಜನಿಕರಿಗೆ ಪ್ರದರ್ಶಿಸಲಾಯಿತು. ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಿ ಜಾಥಾದ ಉದ್ದಕ್ಕೂ ಸಂವಿಧಾನ ಪ್ರಸ್ತಾವನೆಯ ಪ್ರತಿಗಳನ್ನು ಹಂಚಿಕೆ ಮಾಡಲಾಯಿತು.

ಜಾಥಾವನ್ನು ವಿವಿಧ ಗ್ರಾಮಗಳಲ್ಲಿ ಕಳಶ ಹಿಡಿದ ಮತ್ತು ಪೂರ್ಣ ಕುಂಭ ಹೊತ್ತ ಮಹಿಳೆಯರು, ನೇತಾರರ ವೇಷ ಭೂಷಣಗಳನ್ನು ಧರಿಸಿದ ವಿದ್ಯಾರ್ಥಿಗಳು, ಹಲಗೆ, ಮತ್ತು ಡೊಳ್ಳು ಕಲಾವಿದರು, ಕಂಸಾಳೆ ಹಾಗೂ ನಂದಿ ಕೋಲು ಕುಣಿತದ ಕಲಾವಿದರು, ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿಗಳು, ಜನಪ್ರತಿನಿಧಿಗಳು, ಊರಿನ ಮುಖಂಡರು ಹಾಗೂ ಸಾರ್ವಜನಿಕರು ಅದ್ದೂರಿಯಾಗಿ ಸ್ವಾಗತಿಸಿದರು.

ಜಾಥಾವನ್ನು ಮೊದಲಿಗೆ ಬನ್ನಿಹಟ್ಟಿ ಗ್ರಾಮದಲ್ಲಿ ಅದ್ದೂರಿಯಾಗಿ ಸ್ವಾಗತಿಸಲಾಯಿತು. ಗ್ರಾಮದ ಬೀದಿಗಳಲ್ಲಿ ಪಥ ಸಂಚಲನದೊಂದಿಗೆ ಮೆರವಣಿಗೆ ಮಾಡಿ, ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿಗಳು ಡ್ರಮ್ಸ್ ಬಾರಿಸಿದರು. ಶಾಲೆಯ ಶಿಕ್ಷಕರು ಸೇರಿದಂತೆ ಅಧಿಕಾರಿಗಳು ನಂದಿಕೋಲು ವಾದನಕ್ಕೆ ಹೆಜ್ಜೆ ಹಾಕಿದ್ದು ವಿಶೇಷವಾಗಿತ್ತು.

ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ಸಮಾಜ ಕಲ್ಯಾಣ ಇಲಾಖೆಯ



ಸಹಾಯಕ ನಿರ್ದೇಶಕ ಎನ್. ಕೆ.ವೆಂಕಟೇಶ ಅವರು ನೆರೆದಿದ್ದ ಎಲ್ಲರಿಗೂ ಸಂವಿಧಾನದ ಪ್ರತಿಜ್ಞಾ ವಿಧಿ ಬೋಧಿಸಿದರು.

ಜಾಥಾವು ಲಿಂಗದಹಳ್ಳಿ, ಉಬ್ಬಲಗುಂಡಿ ಗ್ರಾಮಗಳ ಮೂಲಕ ಭವ್ಯ ಸ್ವಾಗತದೊಂದಿಗೆ ಸಾಗಿತು. ಯು.ರಾಜಾಪುರದಲ್ಲಿ ಹಲಗೆ ವಾದನ ಗಮನ ಸೆಳೆಯಿತು ಹಾಗೂ ಸಂವಿಧಾನಕ್ಕೆ ಸಂಬಂಧಿಸಿದಂತೆ ನಡೆಸಿದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಮಾಳಾಪುರ ಗ್ರಾಮದಲ್ಲಿ ಕೋಲಾಟ ಮನಮೋಹಕವಾಗಿತ್ತು.

ಬಳಿಕ ಅಂತಾಪುರ ಗ್ರಾಮದಲ್ಲಿ ಜಾಥಾಗೆ ಬಹಳ ಅದ್ದೂರಿ ಸ್ವಾಗತ ದೊರೆಯಿತು. ವಿಶೇಷವಾಗಿ ಬೈಕ್ ರ್ಯಾಲಿ, ಶಾಲಾ ಮಕ್ಕಳಿಂದ ಡ್ರಮ್ಸ್ ವಾದನ, ಕೋಲಾಟ ಹಾಗೂ ಅಂಗನವಾಡಿ ಕಾರ್ಯಕರ್ತೆಯರ ನೇತೃತ್ವದಲ್ಲಿ 150 ಮಹಿಳೆಯರು ಪೂರ್ಣ ಕುಂಭ ಹೊತ್ತು ಸ್ವಾಗತಿಸಿದರು.

ವಿಠ್ಠಲಾಪುರ ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಟಿ.ಎಚ್. ದೇವೇಂದ್ರಪ್ಪ ಮಾತನಾಡಿ, ಜಾಥಾ ಕಾರ್ಯಕ್ರಮದಲ್ಲಿ ಎಲ್ಲಾ ಸಮುದಾಯಗಳ ಮುಖಂಡರು ಆಸಕ್ತಿಯಿಂದ ಪಾಲ್ಗೊಂಡಿರುವುದು ಖುಷಿ ತಂದಿದೆ. ಡಾ.ಬಿ.ಆರ್. ಅಂಬೇಡ್ಕರ್ ಅವರು ಅಪಾರ ಅಧ್ಯಯನ ಮಾಡಿ, ಮೂರು ವರ್ಷಗಳ ಕಾಲ ಸಂವಿಧಾನವನ್ನು ರಚಿಸಿದ್ದಾರೆ ಎಂದು ಹೇಳಿದರು.

ನಂತರದಲ್ಲಿ ಮೆಟ್ರಿಕಿ ಗ್ರಾಮದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿಗಳ ಡೊಳ್ಳು ಕುಣಿತ ಅತ್ಯಂತ ಆಕರ್ಷಕವಾಗಿದ್ದು, ನೋಡುಗರ ಕಣ್ಮನ ಸೆಳೆಯಿತು.

ಜಾಥಾ ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಿಬ್ಬಂದಿ ವರ್ಗದವರು, ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಜನಪ್ರತಿನಿಧಿಗಳು, ವಿವಿಧ ಇಲಾಖೆಗಳ ಸಿಬ್ಬಂದಿ ವರ್ಗದವರು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಕಳಶ ಹಿಡಿದ ಹಾಗೂ ಪೂರ್ಣ ಕುಂಭ ಹೊತ್ತ ಮಹಿಳೆಯರು ಮತ್ತು ಸಾರ್ವಜನಿಕರು ಪಾಲ್ಗೊಂಡಿದ್ದರು.

## ಸಂವಿಧಾನ ಜಾಗೃತಿ ಜಾಥಾ



ಶಿವಮೊಗ್ಗ: ತೀಥಹಳ್ಳಿ ತಾಲ್ಲೂಕಿನ ಹೆದ್ದೂರಿಗೆ ಫೆ.18 ರಂದು ಸಂವಿಧಾನ ಜಾಗೃತಿ ಜಾಥಾ ಆಗಮಿಸಿದ್ದು, ಗ್ರಾ.ಪಂ ವತಿಯಿಂದ ಪೂರ್ಣಕುಂಭ, ಬೈಕ್ ರ್ಯಾಲಿ, ಬಲೂನ್ ರ್ಯಾಲಿ ಮೂಲಕ ಅದ್ದೂರಿಯಾಗಿ ಬರ ಮಾಡಿಕೊಳ್ಳಲಾಯಿತು.

ಗ್ರಾ.ಪಂ ಅಧ್ಯಕ್ಷ ಲೋಕೇಶ್ ಕಾರ್ಯಕ್ರಮ ಉದ್ಘಾಟಿಸಿದರು. ಸಂವಿಧಾನ ಜಾಗೃತಿ ಜಾಥಾ ಪ್ರಯುಕ್ತ ಆಯೋಜಿಸಲಾಗಿದ್ದ ಪ್ರಬಂಧ, ಚಿತ್ರಕಲಾ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಶಿಕ್ಷಕರಾದ ಶಿವಪ್ಪ ಸಂವಿಧಾನ ಪೀಠಿಕೆಯನ್ನು ವಾಚಿಸಿದರು. ಪಿಡಿಓ ಕರಿಬಸಪ್ಪ, ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು, ಸಾರ್ವಜನಿಕರು ಪಾಲ್ಗೊಂಡಿದ್ದರು.

## ಫಾರ್ಮಸಿ ಪದವೀಧರರು ಬೇಕಾಗಿದ್ದಾರೆ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘಗಳ ಮೂಲಕ ಕಡಿಮೆ ಹಾಗೂ ನ್ಯಾಯಯುತ ಬೆಲೆಯಲ್ಲಿ ಜನರಿಕ್ ಔಷಧಿಗಳನ್ನು ಒದಗಿಸಲು ಪ್ರಧಾನಮಂತ್ರಿ ಜನೌಷಧಿ ಕೇಂದ್ರಗಳನ್ನು ತೆರೆಯಲು ಇದಕ್ಕಾಗಿ ಫಾರ್ಮಸಿ ಪದವೀಧರರು ಸೇವೆ ಸಲ್ಲಿಸಲು ಅವಶ್ಯಕತೆ ಇದೆ.

ಆಸಕ್ತರು ಸಹಕಾರ ಸಂಘಗಳ ಉಪನಿಬಂಧಕರ ಕಚೇರಿ, ಜಿಲ್ಲೆಯ ಹಾಗೂ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಬೆಳಗಾವಿ ಉಪವಿಭಾಗ, ಬೈಲಹೊಂಗಲ ಉಪವಿಭಾಗ ಹಾಗೂ ಚಿಕ್ಕೋಡಿ ಉಪವಿಭಾಗ ಕಚೇರಿಗೆ ಭೇಟಿ ನೀಡಿ ಮಾಹಿತಿ ಪಡೆದುಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಬೆಳಗಾವಿ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಮೋ. ಸಂಖ್ಯೆ 8884012838, ಬೈಲಹೊಂಗಲ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಮೋ. ಸಂಖ್ಯೆ 9538116910 ಅಥವಾ ಚಿಕ್ಕೋಡಿಯ ಸಹಕಾರ ಸಂಘಗಳ ಸಹಾಯಕ ನಿಬಂಧಕರು ದೂರವಾಣಿ 7892826158 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಸಹಕಾರ ಸಂಘಗಳ ಸಹಾಯಕ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೆಚ್ಚುವರಿ ಬಸ್‌ಗಳ ಕಾರ್ಯಾಚರಣೆ

ಬೆಳಗಾವಿ: ಯಲ್ಲಮ್ಮ ದೇವಿ, ಉಳವಿ ಶ್ರೀ ಚನ್ನಬಸವೇಶ್ವರ ಹಾಗೂ ಮೋಹನಗಾ ದಡ್ಡಿ ಭಾವೇಶ್ವರಿ ದೇವಿ ಜಾತ್ರೆಯ ಇರುವುದರಿಂದ ಬೆಳಗಾವಿ ಕೇಂದ್ರ ಬಸ್ ನಿಲ್ದಾಣ, ಬೈಲಹೊಂಗಲ ನಿಲ್ದಾಣದಿಂದ ಹೆಚ್ಚುವರಿ ಬಸ್‌ಗಳನ್ನು ಕಾರ್ಯಾಚರಣೆ ಮಾಡಲು ಬೆಳಗಾವಿ ವಾಕರಸಾಸಂಸ್ಥೆಯುವು ನಿರ್ಧರಿಸಿದೆ.

ಜಾತ್ರಾ ಅವಧಿಯಲ್ಲಿ ಬೆಳಗಾವಿ, ಬೈಲಹೊಂಗಲ ಬಸ್ ನಿಲ್ದಾಣ, ಯಲ್ಲಮ್ಮನ ಗುಡ್ಡದಲ್ಲಿ, ಉಳವಿ ಹಾಗೂ ದಡ್ಡಿಯಲ್ಲಿ ಜಾತ್ರಾ ಬಿಂದು ಸ್ಥಾಪಿಸಿ ಕೆ. ಎಸ್. ಟಿ ಪೇದೆ ಅವರನ್ನು ನಿಯೋಜಿಸಿ ಪ್ರಯಾಣಿಕರಿಗೆ ಉತ್ತಮ ಸಾರಿಗೆ ಸೌಲಭ್ಯ ಒದಗಿಸುವ ದೃಷ್ಟಿಯಿಂದ ವಾಹನಗಳ ಕಾರ್ಯಾಚರಣೆ ಮಾಡಲಾಗಿದೆ.

ಯಲ್ಲಮ್ಮ ದೇವಿ ಜಾತೆಗೆ (ಭಾರತ ಹುಣ್ಣಿಮೆ ) ಫೆ.21 ರಿಂದ 27 ರ ವರೆಗೆ, ಉಳವಿ ಶ್ರೀ ಚನ್ನಬಸವೇಶ್ವರ ಜಾತ್ರೆ ಫೆ.21 ರಿಂದ 25 ರವರೆಗೆ ಹಾಗೂ ಮೋಹನಗಾ ದಡ್ಡಿ ಶ್ರೀ ಭಾವೇಶ್ವರಿ ದೇವಿ ಜಾತ್ರೆ ಫೆ. 24 ರಿಂದ 27 ರವರೆಗೆ ನಡೆಯಲಿದ್ದು, ವಿಶೇಷ ಸಾರಿಗೆ ಕಾರ್ಯಾಚರಣೆಗೊಳಿಸಲು ವ್ಯವಸ್ಥೆ ಮಾಡಲಾಗಿದೆ.

ಪ್ರಯಾಣಿಕರು ತಂಡಗಳ ರೂಪದಲ್ಲಿ ಪ್ರಯಾಣಿಸಲು ಬಯಸಿದರೆ.

ಸಾಂದರ್ಬಿಕ ಒಪ್ಪಂದದ ಮೇಲೆ ವಾಹನಗಳನ್ನು ಒದಗಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ 7760991625/ 7760991627 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ವಾಕರಸಾಸಂಸ್ಥೆ, ಹಿರಿಯ ವಿಭಾಗೀಯ ನಿಯಂತ್ರಣಾಧಿಕಾ-ರಿಗಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ಮಾಯಕ್ಕಾ ದೇವಿ ಜಾತ್ರೆಗೆ ಹೆಚ್ಚುವರಿ ಬಸ್‌ಗಳ ಸೌಲಭ್ಯ

ಬೆಳಗಾವಿ: ಚಿಂಚಲಿ ಶ್ರೀ ಮಾಯಕ್ಕಾ ದೇವಿ ಜಾತ್ರೆಯ ಪ್ರಯುಕ್ತ ಚಿಕ್ಕೋಡಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ರಾಯಬಾಗ ಬಸ್ ನಿಲ್ದಾಣನದ ಮಿರಜ ನಿಯಂತ್ರಣದಲ್ಲಿ ಫೆ 23 ರಿಂದ ಮಾ 5 ರವರೆಗೆ ಚಿಂಚಲಿ ಶ್ರೀ ಮಾಯಕ್ಕಾ ದೇವಿ ಜಾತ್ರೆಗೆ ಚಿಕ್ಕೋಡಿ, ಸಂಕೇಶ್ವರ, ಗೋಕಾಕ, ರಾಯಬಾಗ, ಅಥಣಿ, ಕುಡಚಿ, ಮಿರಜ ಸ್ಥಳಗ ಳಿಂದ ಶ್ರೀ ಕ್ಷೇತ್ರ ಮಾಯಕ್ಕಾದೇವಿ ಚಿಂಚಲಿವರೆಗೆ ಚಿಕ್ಕೋಡಿ ವಿಭಾಗದ ರಾಯಬಾಗ, ಚಿಕ್ಕೋಡಿ.ಗೋಕಾಕ ,ಅಥಣಿ ಘಟಕಗಳಿಂದ ವಿಶೇಷ ಹೆಚ್ಚುವರಿ ಬಸ್ಸುಗಳ ವ್ಯವಸ್ಥೆ ಮಾಡಲಾಗಿದೆ.

ಪ್ರಯಾಣಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಚಿಕ್ಕೋಡಿ ವಿಭಾಗ ವಾಕರಸಾಸಂಸ್ಥೆಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶೇಷ ಉಪನ್ಯಾಸ ಕಾರ್ಯಕ್ರಮ

ಬೆಳಗಾವಿ: ಜನಕಲ್ಯಾಣ ಟ್ರಸ್ಟ್, ಮರಾಠಾ ಮಂದಿರ ಮತ್ತು ಶ್ರೀ ಸರಸ್ವತಿ ವಾಚನಾಲಯದ ಸಹಯೋಗಲದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಪಟ್ಟಾಭಿಷೇಕದ 350ನೇ ವರ್ಷಾಚರಣೆಯ ನಿಮಿತ್ತ ವಿಶೇಷ ಉಪನ್ಯಾಸ ಕಾರ್ಯಕ್ರಮ ಮಂಗಳವಾರ ಫೆ.20ರಂದು ಮರಾಠಾ ಮಂದಿರದಲ್ಲಿ ಜರುಗಲಿದೆ.

ಆರ್‌ಎಸ್‌ಎಸ್ ಅಖಿಲ ಭಾರತೀಯ ಸಹ ವ್ಯವಸ್ಥಾ ಪ್ರಮುಖ ಅನಿಲ್ ಓಕ್ ಮತ್ತು ಆರ್‌ಎಸ್‌ಎಸ್ ಕರ್ನಾಟಕ ಉತ್ತರದ ಪ್ರಾಂತ ಕಾರ್ಯಕಾರಿಣಿ ಸದಸ್ಯ ರವೀಂದ್ರ ಅವರಿಂದ ಮುಖ್ಯ ಭಾಷಣ/ ಉಪನ್ಯಾಸ ಜರುಗಲಿದೆ.

ಉಜ್ಜಯನಿಯ ಅಖಿಲ ಭಾರತೀಯ ವಾಲ್ಮೀಕಿ ಸನಾತನ ಧರ್ಮಸಭಾ ರಾಷ್ಟ್ರೊಥಯ ಅಧ್ಯಕ್ಷ ಬಾಲಯೋಗಿ ಉಮೇಶನಾಥ ಮಹಾರಾಜ ಅವರು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ ಎಂದು ಜನ ಕಲ್ಯಾಣ ಟ್ರಸ್ಟ್ ಅಧ್ಯಕ್ಷ ಅರವಿಂದರಾವ ದೇಶಪಾಂಡೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕ ಪ್ರಕಟಣೆ

ಕೆಯುಐಡಿಎಫ್‌ಸಿ ಹಾಗೂ ಮಹಾನಗರ ಪಾಲಿಕೆ, ಮೂಲಕ ಸಾರ್ವಜನಿಕರಲ್ಲಿ ವಿನಂತಿಸುವುದೇನೆಂದರೆ, ಇತ್ತೀಚೆಗೆ ನಗರದಲ್ಲಿ ನಗರ ನೀರು ಸರಬರಾಜು ಯೋಜನೆ ಹೆಸರು ಹೇಳಿಕೊಂಡು ನಳ ಪರಿಶೀಲನೆ, ಹಾಗೂ ಬಿಲ್ ಪರಿಶೀಲನೆ ಮಾಡಲು ಬಂದಿರುವುದಾಗಿ ಹೇಳಿ, ಮನೆಯಲ್ಲಿ ಒಬ್ಬರೇ ಮಹಿಳೆಯಿರುವಾಗ ಮನೆಗಳಿಗೆ ಭೇಟಿ ನೀಡಿ ಕಳವು ಮಾಡುವ ತಂಡಗಳು ಕಾರ್ಯ ನಿರ್ವಹಿಸುತ್ತಿರುವುದು ಕಂಡುಬಂದಿರುತ್ತದೆ.

ಆದ್ದರಿಂದ ಸಾರ್ವಜನಿಕರು ಹೀಗೆ ಹೇಳಿಕೊಂಡು ಬರುವ ಜನರಿಗೆ ಮೊದಲು ಅವರ ಗುರುತಿನ ಚೀಟಿ ತೋರಿಸಲು ಕೇಳಬೇಕಾಗಿ ವಿನಂತಿ.

ಅವರನ್ನು ಮನೆಯ ಗೇಟ ಹತ್ತಿರವೆ ನಿಲ್ಲಿಸಿ ವಿಚಾರಿಸಲು ಕೋರಿದೆ. ಸಂಶಯ ಕಂಡುಬಂದಲ್ಲಿ ಈ ಕೆಳಗೆ ಹೆಸರಿಸಿದ ದೂರವಾಣಿ 9886778294, 6263876592 ಸಂಖ್ಯೆಗಳಿಗೆ ಕರೆ ಮಾಡಿ ಖಾತ್ರಿ ಪಡಿಸಿಕೊಳ್ಳಲು ಮಾನ್ಯ ಆಯುಕ್ತರು, ಬೆಳಗಾವಿ ಮಹಾನಗರ ಪಾಲಿಕೆ, ಪರವಾಗಿ ಕೋರಲಾಗಿದೆ.

## ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆ

# ಅಪಘಾತ ಪ್ರಮಾಣ ತಗ್ಗಿಸಲು ಸೂಕ್ತ ಕ್ರಮಕ್ಕೆ ಪೊಲೀಸ್ ಆಯುಕ್ತ ಸಿದ್ದರಾಮಪ್ಪ ಸೂಚನೆ

ಬೆಳಗಾವಿ: ಜಿಲ್ಲೆಯಾದ್ಯಂತ ಹಾಗೂ ನಗರದಲ್ಲಿ ಪ್ರಸಕ್ತ ಸಾಲಿನಲ್ಲಿ ಕನಿಷ್ಠ ಶೇ.25 ರಷ್ಟು ಅಪಘಾತಗಳನ್ನು ಕಡಿಮೆಗೊಳಿಸಲು ಎಲ್ಲ ರೀತಿಯ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಬೆಳಗಾವಿ ನಗರ ಪೊಲೀಸ್ ಆಯುಕ್ತರಾದ ಎಸ್.ಎನ್.ಸಿದ್ದರಾಮಪ್ಪ ಸೂಚನೆ ನೀಡಿದರು.



ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಸೋಮವಾರ(ಫೆ.19) ನಡೆದ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯಲ್ಲಿ ಅವರು ಮಾತನಾಡಿದರು.

ಹೆಲ್ಮೆಟ್ ಇಲ್ಲದೇ ಸಂಚ-ರಿಸುವವರ ಚಾಲನಾ ಪರವಾನಿಗೆ ಅಮಾನತುಗೊಳಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದಲ್ಲದೇ ನಗರದ ಆಯ್ದ ಪ್ರಮುಖ ಸ್ಥಳಗಳಲ್ಲಿ ಪ್ರಿಪೇಡ್ ಆಟೋ ವ್ಯವಸ್ಥೆ ಕಲ್ಪಿಸಲು ಅಗತ್ಯ ಕ್ರಮ ವಹಿಸುವಂತೆ ತಿಳಿಸಿದರು.

ನಗರದ ಫುಟ್ ಪಾತ್ ಗಳಲ್ಲಿ ಕುಳಿತುಕೊಳ್ಳುವ ಬೀದಿ ವ್ಯಾಪಾರಿಗಳಿಂದ ಮಹಾನಗರ ಪಾಲಿಕೆಯವರು ಕರ ವಸೂಲಿ ಮಾಡುತ್ತಿರುವುದರಿಂದ ಅಂತಹ ವ್ಯಾಪಾರಿಗಳನ್ನು ತೆರವುಗೊಳಿಸುವುದು ಕಷ್ಟವಾಗುತ್ತಿದೆ. ಆದ್ದರಿಂದ ಈ ಬಗ್ಗೆ ಪಾಲಿಕೆ ಗಮನಹರಿಸಬೇಕು ಎಂದು ಸಿದ್ದರಾಮಪ್ಪ ತಿಳಿಸಿದರು.

ದೇಶದಾದ್ಯಂತ ಅಪಘಾತ ಪ್ರಮಾಣವನ್ನು ಕಡಿಮೆಗೊಳಿಸುವ ನಿಟ್ಟಿನಲ್ಲಿ ಸುಪ್ರೀಂ ಕೋರ್ಟ್ ನಿರಂತರ ನಿಗಾ ವಹಿಸಿರುತ್ತದೆ. ಆದ-್ದರಿಂದ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಸಭೆಗೆ ಹಾಜರಾಗುವುದರ ಜತೆಗೆ ತಮಗೆ ನಿಗದಿಪಡಿಸಿದ ಕೆಲಸಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ ತಿಳಿಸಿದರು.

ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಹದಿನೇಳು ಬ್ಲ್ಯಾಕ್ ಸ್ಪಾಟ್ ಗಳನ್ನು ಗುರುತಿಸಲಾಗಿದೆ. ಈ ಸ್ಥಳಗಳಲ್ಲಿ ಅಪಘಾತಗಳನ್ನು ತಡೆಗಟ್ಟುವುದಕ್ಕೆ ಸಂಬಂಧಿಸಿದಂತೆ ಪೊಲೀಸ್, ಲೋಕೋಪಯೋಗಿ ಮತ್ತಿತರ ಸಂಬಂಧಿತ ಇಲಾಖೆಯ ಅಧಿಕಾರಿಗಳ ಜಂಟಿ ತಂಡ ಪರಿಶೀಲಿಸಿ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದರು.

ಹೆದ್ದಾರಿ ಅಥವಾ ಜಿಲ್ಲಾ ಮುಖ್ಯರಸ್ತೆಗೆ ಕೂಡುರಸ್ತೆಗಳಿರುವ ಕಡೆಗಳಲ್ಲಿ ಸೂಕ್ತ ಬೆಳಕಿನ ವ್ಯವಸ್ಥೆ ಕಲ್ಪಿಸಬೇಕು; ರಸ್ತೆ ಸರಿಯಾಗಿ ಕಾಣಿಸಲು ಅನುಕೂಲವಾಗುವಂತೆ ಗಿಡಗಂಟೆಗಳು ಅಥವಾ ಪೊದೆಯನ್ನು ಕತ್ತರಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕಬ್ಬು ಸಾಗಾಣಿಕೆ ಮಾಡುವ ಹಾಗೂ ಇತರೆ ಟ್ರ್ಯಾಕ್ಟರ್ ಹಾಗೂ ಟ್ರೇಲರ್ ಗಳಿಗೆ ರಿಫ್ಲೆಕ್ಟರ್ ಕಡ್ಡಾಯವಾಗಿ ಅಳವಡಿಸಲು ವಿಶೇಷ ಅಭಿಯಾನ ಹಮ್ಮಿಕೊಳ್ಳಬೇಕು ಎಂದು ಪ್ರಾದೇಶಿಕ ಸಾರಿಗೆ ಅಧಿಕಾ-ರಿಗಳು ಕ್ರಮ ವಹಿಸಬೇಕು ಎಂದು ಡಾ.ಭೀಮಾಶಂಕರ ಗುಳೇದ ಹೇಳಿದರು.

ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸುವಂತೆ ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳಬೇಕು. ಪರವಾನಿಗೆ ನೀಡುವಾಗ ಮತ್ತು ವಾಹನ ನೋಂದಣಿ ಸಂದರ್ಭದಲ್ಲಿ ಈ ಬಗ್ಗೆ ಗಮನಹರಿಸಬೇಕು ಎಂದು ಡಾಗುಳೇದ ನಿರ್ದೇಶನ ನೀಡಿದರು.

ನಗರದ ಕೆಲವು ಪ್ರದೇಶಗಳಲ್ಲಿ ಖಾಸಗಿ ಬಸ್ ಗಳನ್ನು ನಿಲ್ಲಿಸುವುದರಿಂದ ಸಂಚಾರಕ್ಕೆ ತೊಂದರೆಯಾಗುತ್ತಿದೆ. ಇದಲ್ಲದೇ ಫುಟ್ ಪಾಥ್ ಅತಿ-ಕ್ರಮಣದಿಂದ ಜನಸಂಚಾರಕ್ಕೂ ಅನಾನುಕೂಲವಾಗುತ್ತಿದೆ ಎಂಬ ದೂರುಗಳು ಕೇಳಿಬಂದಿವೆ ಎಂದು ಲೋಕೋಪಯೋಗಿ ಇಲಾಖೆಯ ಅಧೀಕ್ಷಕ ಎಂಜಿನಿಯರ್ ಹಾಗೂ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿಯ ಸದಸ್ಯ ಕಾರ್ಯದರ್ಶಿ ಅರುಣ ಕುಮಾರ್ ಪಾಟೀಲ ಸಭೆಯಲ್ಲಿ ವಿವರಿಸಿದರು.

ಬ್ಲ್ಯಾಕ್ ಸ್ಪಾಟ್ ಗಳನ್ನು ಸಂಬಂಧಿತ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ಪರಿಶೀಲಿಸಿ ಮುಂಬರುವ ದಿನಗಳಲ್ಲಿ ಅಪಘಾತಗಳ ನಿಯಂತ್ರಣಕ್ಕೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು.

ಡಿಸಿಪಿ ಸ್ನೇಹಾ, ನಗರದ ಪ್ರಮುಖ ವೃತ್ತ ಮತ್ತು ರಸ್ತೆಗಳಲ್ಲಿ ಪಾದಚಾ-ರಿಗಳಿಗೆ ಅನುಕೂಲವಾಗುವಂತೆ ಝಿಬ್ರಾ ಕ್ರಾಸಿಂಗ್ ಮತ್ತಿತರ ಮಾರ್ಕಿಂಗ್ ಹಾಗೂ ಸಂಚಾರ ಚಿಹ್ನೆಗಳನ್ನು ಅಳವಡಿಸುವ ಅಗತ್ಯವಿದೆ ಎಂದು ಹೇಳಿದರು.

ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಎಂಜಿನಿಯರ್ ಎಸ್.ಬಿ.ಸೊಬರದ, ಸಮಿತಿಯ ಸದಸ್ಯರಾದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಹೇಶ್ ಕೋಣಿ, ಸಾರಿಗೆ ಇಲಾಖೆಯ ಡಿಟಿಓ ಲಮಾಣಿ, ಪ್ರಾದೇಶಿಕ ಸಾರಿಗೆ ಅಧಿಕಾರಿ ನಾಗೇಶ್ ಮುಂಡಾಸ, ವಾರ್ತಾಧಿಕಾರಿ ಗುರುನಾಥ ಕಡಬೂರ ಸೇರಿದಂತೆ ಲೋಕೋಪಯೋಗಿ, ಪೊಲೀಸ್, ಸಾರಿಗೆ ಇಲಾಖೆ, ಮಹಾನಗರ ಪಾಲಿಕೆ ಮತ್ತಿತರ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಸೆಬಿಗೆ ಡಿಆರ್‌ಹೆಚ್‌ಪಿ ಸಲ್ಲಿಸಿದ ಗೋಲ್ಡ್ ಪ್ಲಸ್ ಗ್ಲಾಸ್ ಇಂಡಸ್ಟ್ರಿ

ಹುಬ್ಬಳ್ಳಿ: ಗೋಲ್ಡ್ ಪ್ಲಸ್ ಗ್ಲಾಸ್ ಇಂ-ಡಸ್ಟ್ರಿ ಲಿಮಿಟೆಡ್ (ತನ್ನ ಡ್ರಾಫ್ಟ್ ರೆಡ್ ಹೆ-ರಿಂಗ್ ಪ್ರಾಸ್ಪೆಕ್ಟಸ್ (ಡಿಆರ್‌ಹೆಚ್‌ಪಿ) ನ್ನು ಮಾರುಕಟ್ಟೆ ರೆಗ್ಯುಲೇಟರಿ ಸೆಕ್ಯುರಿಟೀಸ್ ಮತ್ತು ಎಕ್ಸ್‌ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ)ಗೆ ಸಲ್ಲಿಸಿದೆ. ಸಿಆರ್‌ಐಎಸ್‌ಐಎಲ್ ವರದಿ ಪ್ರಕಾರ, ಕಂಪನಿ ಸೆಪ್ಟೆಂಬರ್ 30, 2023ರಂತೆ ಫ್ಲೋಟ್ ಗ್ಲಾಸ್‌ನ ಉತ್ಪಾದನಾ ಸಾಮರ್ಥ್ಯದ 22% ಪಾಲನ್ನು ಹೊಂದಿರುವ ಭಾರತದಲ್ಲಿನ ಎರಡನೇ ಅತಿದೊಡ್ಡ ಫ್ಲೋಟ್ ಗ್ಲಾಸ್ ತಯಾರಕ ಕಂಪನಿಯಾಗಿದೆ.

ಕಂಪನಿಯು ಈಕ್ವಿಟಿ ಷೇರುಗಳ ಇನಿಷಿಯಲ್ ಪಬ್ಲಿಕ್ ಆಫರಿಂಗ್ ಮೂಲಕ ಹಣ ಸಂಗ್ರಹಿಸಲು ಯೋಜಿಸಿದೆ (ಪ್ರತಿಯೊಂದರ ಮುಖಬೆಲೆ ರೂ 10). ಈ ಆಫರಿಂಗ್ ರೂ 500 ಕೋಟಿ ವರೆಗಿನ ಹೊಸ ಈಕ್ವಿಟಿ ಷೇರುಗಳನ್ನು ಒಳಗೊಂಡಿದೆ (ತಾಜಾ ಸಂಚಿಕೆ) ಮತ್ತು ಸೆಲ್ಲಿಂಗ್ ಷೇರ್ ಹೋಲ್ಡರ್ ಗಳ 15,667,977 ಈಕ್ವಿಟಿ ಷೇರಿನ ಮಾರಾಟದ ಆಫರ್ ಇದೆ(ಆಫರ್ ಫಾರ್ ಸೇಲ್).

ಕಂಪನಿಯು ತಾಜಾ ಸಂಚಿಕೆಯಿಂದ ಬರುವ ನಿವ್ವಳ ಆದಾಯವನ್ನು ಈ 2 ವಿಚಾರಗಳಿಗೆ ಬಳಸಿಕೊಳ್ಳಲು ಪ್ರಸ್ತಾಪಿಸುತ್ತದೆ- 1. ನಮ್ಮ ಎಲ್ಲಾ ಅಥವಾ ಕೆಲವು ಸಾಲಗಳ ಮರುಪಾವತಿ/ಪೂರ್ವಪಾವತಿ ಮತ್ತು 2. ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳು.


ಮಾರಾಟದ ಆಫರ್ ಸುರೇಶ್ ತ್ಯಾಗಿ ಅವರಿಂದ 1,019,995 ಈಕ್ವಿಟಿ ಷೇರುಗಳು, ಜಿಮ್ಮಿ ತ್ಯಾಗಿ ಅವರ 1,019,995 ವರೆಗಿನ ಈಕ್ವಿಟಿ ಷೇರುಗಳು (ಒಟ್ಟಾರೆಯಾಗಿ, ಪ್ರಮೋಟರ್ ಸೆಲ್ಲಿಂಗ್ ಷೇರ್ ಹೋಲ್ಡರ್ಸ್), ಅಪಾರ್ಚುನಿಟೀಸ್ ಫಂಡ್ ನ 10,277,987 ವರೆಗಿನ ಈಕ್ವಿಟಿ ಷೇರುಗಳು ಮತ್ತು ಕೊಟಕ್ ಸ್ಪೆಷಲ್ ಸಿಚುವೇಷನ್ಸ್ ಫಂಡ್ ನಿಂದ 3,350,000 ಈಕ್ವಿಟಿ ಷೇರುಗಳನ್ನು ಒಳಗೊಂಡಿದೆ. (ಒಟ್ಟಾರೆಯಾಗಿ, ಇನ್ವೆಸ್ಟರ್ ಸೆಲ್ಲಿಂಗ್ ಷೇರ್ ಹೋಲ್ಡರ್ಸ್).

(ಪ್ರಮೋಟರ್ ಸೆಲ್ಲಿಂಗ್ ಷೇರ್ ಹೋಲ್ಡರ್ಸ್ ಮತ್ತು ಇನ್ವೆಸ್ಟರ್ ಸೆಲ್ಲಿಂಗ್ ಷೇರ್ ಹೋಲ್ಡರ್ಸ್, ಸೆಲ್ಲಿಂಗ್ ಷೇರ್ ಹೋಲ್ಡರ್ಸ್ ಎಲ್ಲವನ್ನೂ ಸಂಯೋಜಿಸಲಾಗಿದೆ)

ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಮೂಲಕ ನೀಡಲಾಗುವ ಈಕ್ವಿಟಿ ಷೇರುಗಳನ್ನು ಬಿಎಸ್‌ಇ ಲಿಮಿಟೆಡ್ (ಬಿಎಸ್‌ಇ) ಮತ್ತು ನ್ಯಾಷನಲ್ ಸ್ಟಾಕ್ ಎಕ್ಸ್ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ (ಎನ್‌ಎಸ್‌ಇ)ನಲ್ಲಿ ಪಟ್ಟಿ ಮಾಡಲು ಪ್ರಸ್ತಾಪಿಸಲಾಗಿದೆ.

ಐಐಎಫ್‌ಎಲ್ ಸೆಕ್ಯುರಿಟೀಸ್ ಲಿಮಿಟೆಡ್, ಆಕ್ಸಿಸ್ ಕ್ಯಾಪಿಟಲ್ ಲಿಮಿಟೆಡ್, ಕೋಟಕ್ ಮಹೀಂದ್ರಾ ಕ್ಯಾಪಿಟಲ್ ಕಂಪನಿ ಲಿಮಿಟೆಡ್ ಮತ್ತು ಎಸ್‌ಬಿಐ ಕ್ಯಾಪಿಟಲ್ ಮಾರ್ಕೆಟ್ಸ್ ಲಿಮಿಟೆಡ್ ಈ ಇಶ್ಯೂವಿನ(ಸಂಚಿಕೆಯ) ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್‌ಗಳಾಗಿವೆ.

## ವಿನೋದ ದೊಡ್ಡಣ್ಣವರ ಅವರಿಗೆ ಕಸಾಪ "ಹೂಗಾರ ದತ್ತಿ ಪ್ರಶಸ್ತಿ" ಪ್ರಕಟ



ಬೆಳಗಾವಿ: ಕನ್ನಡ ಸಾಹಿತ್ಯ ಪರಿಷತ್ತು ಬೆಂಗಳೂರು ವತಿಯಿಂದ ನೀಡಲಾಗುವ "ಪಾಂಡಪ್ಪ ಲಕ್ಷ್ಮಣ ಹೂಗಾರ ದತ್ತಿ ಪ್ರಶಸ್ತಿ" ಈ ಬಾರಿ ಭರತೇಶ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ವಿನೋದ ದೊಡ್ಡಣ್ಣವರ ಅವರಿಗೆ ಲಭಿಸಿದೆ. ಇತ್ತಿಚಿಗೆ ಕಸಾಪ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ಪ್ರಶಸ್ತಿಯನ್ನು ಪ್ರಕಟಿಸಲಾಗಿದೆ.

ಕನ್ನಡ ಸಾಹಿತ್ಯ ಪರಿಷತ್ತನಲ್ಲಿ ಪಾಂಡಪ್ಪ ಲಕ್ಷ್ಮಣ ಹೂಗಾರ ಅವರು ಪೂಜಶ್ರೀ ಶೀವಶರಣೆ ಶಂಕ್ರಮ್ಮ ಹೂಗಾರ ಕಲಾದಗಿ ಇವರ ಸ್ಮರಣಾರ್ಥ "ಪಾಂಡಪ್ಪ ಲಕ್ಷ್ಮಣ ಹೂಗಾರ ದತ್ತಿ ಪ್ರಶಸ್ತಿಯನ್ನು" ಸ್ಥಾಪಿಸಿದ್ದು, ಶಿಕ್ಷಣ, ಸಮಾಜ ಸೇವೆ, ಶಿವ ಶರಣ ಸಾಹಿತ್ಯದಲ್ಲಿ ಸೇವೆ ಸಲ್ಲಿಸಿದ ಮಹನೀಯರಿಗೆ ನಗದು ಪ್ರಶಸ್ತಿ ನೀಡಿ ಸನ್ಮಾನಿಸಬೆಕೆಂಬ ದತ್ತಿ ದಾಣಿಗಳ ಆಶಯವಾಗಿದೆ.

ಈ ಹಿನ್ನಲೆಯಲ್ಲಿ 2023 ನೇ ಸಾಲಿನ ಈ ಪ್ರತಿಷ್ಠಿತ ಪ್ರಶಸ್ತಿಗೆ "ಶರಣ ಸಾಹಿತ್ಯದಲ್ಲಿ ಅನುಪಮ ಸೇವೆ ಸಲ್ಲಿಸಿದ ವಿನೋದ ದೊಡ್ಡಣ್ಣವರ ಅವರನ್ನು ಸರ್ವಾನುಮತದಿಂದ ಸದರಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತು ಪ್ರಕಟಣೆಯಲ್ಲಿ ತಿಳಿಸಿದೆ.

## ಸ್ಕೇಟಿಂಗ್ ಮೂಲಕ ಪುಠಾಣಿ ಮಕ್ಕಳಿಂದ ಸಂವಿಧಾನ ಜಾಗೃತಿ

ಧಾರವಾಡ: ಕಳೆದ ಜನವರಿ 26 ರಿಂದ ಎಲ್ಲರ ಗಮನ ಸೆಳೆಯುತ್ತಿರುವ ಸಂವಿಧಾನ ಜಾಗೃತಿ ಜಾಥಾ ಭಾನುವಾರ ಪುಠಾಣಿ ಮಕ್ಕಳಿಂದ ಸ್ಕೇಟಿಂಗ್ ರ್ಯಾಲಿಯ ಮೂಲಕ ನಡೆದ ಜಾಗೃತಿ ವಿಶೇಷವಾಗಿ ಜನರ ಗಮನ ಸೆಳೆಯಿತು.




ತರಬೇತುದಾರ ಶಶಿಧರ ಪಾಟೀಲ ಅವರ ನೇತೃತ್ವದಲ್ಲಿ ಧಾರವಾಡದ ರೋಲರ್ ಸ್ಕೇಟಿಂಗ್ ಅಕಾಡೆಮಿಯ 25ಕ್ಕೂ ಹೆಚ್ಚು 4 ರಿಂದ 12 ವರ್ಷದ ಸ್ಕೇಟರ್ಸ್‌ಗಳು ಇಲ್ಲಿಯ ಕರ್ನಾಟಕ ಕಾಲೇಜು ವೃತ್ತದಿಂದ ಜ್ಯುಬಿಲಿ ವೃತ್ತದ ಡಾ.ಬಿ.ಆರ್. ಅಂಬೇಡ್ಕರ್ ಪುತ್ಥಳಿ ವರೆಗೂ ಕೈಯಲ್ಲಿ ಸಂವಿಧಾನ ಜಾಗೃತಿ ಫಲಕಗಳನ್ನು ಹಿಡಿದು ಸ್ಕೇಟ್ ಮಾಡುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು. ಡಾ.ಬಿ.ಆರ್. ಅಂಬೇಡ್ಕರ ಅವರ ಪುತ್ಥಳಿ ಎದುರು ಮಕ್ಕಳು ಸಂವಿಧಾನ ಪೀಠಿಕೆ ಓದಿದರು.

ಕರ್ನಾಟಕ ಕಾಲೇಜು ವೃತ್ತದಲ್ಲಿ ಸ್ಕೇಟಿಂಗ್ ರ್ಯಾಲಿಗೆ ಚಾಲನೆ ನೀಡಿದ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಅಲ್ಲಾಭಕ್ಷ ಎಂ. ಎಸ್. ಮಾತನಾಡಿ, ಭಾರತದ ಸಂವಿಧಾನ ರಚನೆಯಾಗಿ 75 ವರ್ಷಗಳಾಗಿರುವ ಹಿನ್ನೆಲೆಯಲ್ಲಿ ಇಡೀ ರಾಜ್ಯದಲ್ಲಿ ಸಂವಿಧಾನದ ಜಾಗೃತಿ ಮಾಡಲಾಗುತ್ತಿದೆ. ಈಗಾಗಲೇ ಧಾರವಾಡದಲ್ಲಿ ಹತ್ತಾರು ರೀತಿಯಲ್ಲಿ ಜಾಥಾಗಳು ನಡೆದರೂ ರಾಜ್ಯದಲ್ಲಿಯೇ ಮೊದಲ ಬಾರಿಗೆ ಸ್ಕೇಟಿಂಗ್ ಮೂಲಕ ಮಕ್ಕಳು ಜಾಗೃತಿ ಮೂಡಿಸಿದ್ದು ವಿಶೇಷ. ಶನಿವಾರವಷ್ಟೇ ಧಾರವಾಡದಲ್ಲಿ ನಡೆದ 10 ಸಾವಿರಕ್ಕೂ ಹೆಚ್ಚು ಮಕ್ಕಳ ಜಾಗೃತಿ ಜಾಥಾ ರಾಜ್ಯದಲ್ಲಿಯೇ ದಾಖಲೆ ನಿರ್ಮಿಸಿದೆ. ಜಿಲ್ಲಾಧಿಕಾರಿಗಳು, ಉಸ್ತುವಾರಿ ಸಚಿವರು ಸೇರಿದಂತೆ ಸಮಾಜದ ಎಲ್ಲರೂ ಜಾಥಾದಲ್ಲಿ ಸಕ್ರೀಯವಾಗಿ ಭಾಗವಹಿಸುವ ಮೂಲಕ ಸಂವಿಧಾನವನ್ನು ಅರಿಯುವ ಕಾರ್ಯ ಮಾಡಲಾಗುತ್ತಿದೆ ಎಂದರು.

ಮಹಾನಗರ ಪಾಲಿಕೆ ಸದಸ್ಯ ಸುರೇಶ ಬೇದರೆ ಸೇರಿದಂತೆ ಸ್ಕೇಟರ್ಸ್‌ಗಳ 20ಕ್ಕೂ ಹೆಚ್ಚು ಪಾಲಕರು ಭಾಗವಹಿಸಿದ್ದರು.

## ಭದ್ರಾವತಿ: ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಅರ್ಜಿ ಆಹ್ವಾನ

ಶಿವಮೊಗ್ಗ; ಭದ್ರಾವತಿ ತಾಲೂಕು ತೋಟಗಾರಿಕೆ ಇಲಾಖಾ ವತಿಯಿಂದ 2024-25ನೇ ಸಾಲಿಗೆ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವೈಯಕ್ತಿಕ ಕೃಷಿ ಹೊಂಡ ನಿರ್ಮಾಣ, ಸಮುದಾಯ ಕೃಷಿಹೊಂಡ, ಪ್ಯಾಕ್ ಹೌಸ್ ನಿರ್ಮಾಣ, ಹಸಿರುಮನೆ ನೆರಳುಪರದೆ ನಿರ್ಮಾಣ, ಈರುಳ್ಳಿ ಶೇಖರಣಾ ಘಟಕ ನಿರ್ಮಾಣಕ್ಕಾಗಿ ಸೌಲಭ್ಯವನ್ನು ಪಡೆಯಲು ಅರ್ಹ ರೈತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ರೈತರು ನಿಗಧಿತ ನಮೂನೆ ಅರ್ಜಿಯನ್ನು ಆಯಾ ತಾಲೂಕು ತೋಟಗಾರಿಕೆ ಇಲಾಖೆಯಲ್ಲಿ ಫೆ. 26 ರೊಳಗಾಗಿ ಹೆಸರನ್ನು ನೊಂದಾಯಿಸಿಕೊಳ್ಳುವಂತೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಭದ್ರಾವತಿ ತಾಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರನ್ನು ಅಥ-ವಾ ಕಚೇರಿ ದೂ.ಸಂ.: 08282-295029 ನ್ನು ಸಂಪರ್ಕಿಸುವುದು.

# ಗ್ರಾಮ ಪಂಚಾಯತಿಗಳಲ್ಲಿ ಸಂವಿಧಾನಜಾಥ ಕ್ಕೆ ಅದ್ದೂರಿ ಸ್ವಾಗತ

ಬೆಳಗಾವಿ: ಸಂವಿಧಾನದ ಮೌಲ್ಯ ಮತ್ತು ಆಶಯಗಳನ್ನು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮತ್ತು ಸಮಾಜಕಲ್ಯಾಣ ಇಲಾಖೆ ಬೆಳಗಾವಿ ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲೆಯ ಎಲ್ಲಗ್ರಾಮ ಪಂಚಾಯತಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಸ್ಥಬ್ದಚಿತ್ರಗಳನ್ನೊಳಗೊಂಡ ವಿಶೇಷ ರಥಗಳೆರೆಡು ಏಕ ಕಾಲಕ್ಕೆ ಎರಡು ಮಾರ್ಗದಲ್ಲಿ ಸಂಚರಿಸುವದರ ಮೂಲಕ ಸಂವಿಧಾನ ಜಾಗೃತಿ ಜಾಥ ಹಮ್ಮಿಕೊಳ್ಳಲಾಗಿದ್ದು ಸದರಿ ಕಾರ್ಯಕ್ರಮವನ್ನು ಗಣರಾಜ್ಯೋತ್ಸವದ ದಿನದಂದು ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಮಾನ್ಯ ಶ್ರೀ ಸತೀಶ ಜಾರಕಿಹೊಳಿ ರವ-ರಿಂದ ಚಾಲನೆಗೊಂಡ ಸ್ಥಬ್ದಚಿತ್ರದ ಮೆರವಣಿಗೆಯು ಜಿಲ್ಲಾದ್ಯಾಂತಎರಡು ಮಾರ್ಗಗಳ ಮೂಲಕ "ಮೊದಲನೆ ಮಾರ್ಗದರಥವು ಬೆಳಗಾವಿ, ಹುಕ್ಕೇರಿ, ನಿಪ್ಪಾಣಿ, ಚಿಕ್ಕೋಡಿ, ಕಾಗವಾಡ, ಅಥಣಿ, ರಾಯಬಾಗ ತಾಲೂಕುಗಳಲ್ಲಿ ಹಾಗೂ ಎರಡನೇ ಮಾರ್ಗದರಥವು ಗೋಕಾಕ,



ಮೂಡಲಗಿ, ರಾಮದುರ್ಗ, ಸವದತ್ತಿ, ಬೈಲಹೊಂಗಲ, ಚನ್ನಮ್ಮನಕಿತ್ತೂರ, ಖಾನಾಪೂರ ತಾಲೂಕುಗಳಿಗೆ ಸ್ಥಬ್ದ ಚಿತ್ರಗಳ ಮೆರವಣಿಗೆಯು ಸಂಚ-ರಿಸುತ್ತಿದೆ.

ಸಂವಿಧಾನದ ಮೂಲ ಆಶಯಗಳಾದ ಸರ್ವಧರ್ಮಗಳ ಸಮಭಾವ, ಸಮಸ್ತ ನಾಗರೀಕರಿಗೆ ಸಾಮಾಜಿಕ, ಆರ್ಥಿಕ ಮತ್ತುರಾಜಕೀಯ ನ್ಯಾಯಕು-ರಿತು, ವಿಚಾರ, ಅಭಿವ್ಯಕ್ತಿ, ವಿಶ್ವಾಸ ಮತ್ತುಧರ್ಮಶ್ರದ್ಧೆಯ ಸ್ವಾತಂತ್ರ್ಯತೆಯ ಅರಿವು, ಸ್ಥಾನಮಾನ ಹಾಗೂ ಅವಕಾಶಗಳ ಸಮಾನತೆಯನ್ನು ದೊರಕಿಸಲು, ರಾಷ್ಟ್ರದಏ-ಕತೆ ಮತ್ತುಅಖಂಡತೆಯನ್ನು ಬಲಗೊಳಿಸಲು, ಎಲ್ಲರಲ್ಲೂ ಭ್ರಾತೃತ್ವ ಭಾವನೆಯನ್ನು ವೃದ್ಧಿಗೊಳಿಸಲು ಈ ಎಲ್ಲಾ ಆಶಯಗಳನ್ನು ಪ್ರತಿ ಮನೆ-ಮನೆಗಳಿಗೂ, ಮನ-ಮನಗಳಿಗೂ ತಲುಪಿಸುವದು ಈ ಕಾರ್ಯಕ್ರಮದ ಮೂಲ ಧ್ಯೇಯವಾಗಿದೆ.

ದಿನಾಂಕ: 18/02/2024 ರಂದು ಮೊದಲ ಮಾರ್ಗದರಥವು ಅಥಣಿ ತಾಲೂಕಿನ ಸಂಕ್ರಟ್ಟಿ ಹಾಗೂ ರಾಯಬಾಗ ತಾಲೂಕಿನ ಶೇಗುನಸಿ, ಕೋಳಿಗುಡ್ಡ, ಯಬರಟ್ಟಿ, ಹಾರೂಗೇರಿ, ಯಲ್ಪಾರಟ್ಟಿ, ಖೇಮಲಾಪೂರ, ಸಿದ್ದಾಪೂರ, ಪರಮಾನಂದ ವಾಡಿ, ಶಿರಗುರ ಮತ್ತು ಕುಡಚಿ ಗ್ರಾಮ ಪಂಚಾಯತಿ ಮೂಲಕ ಸಂಚರಿಸಿ ದಿನಾಂಕ: 19/02/2024 ರಂದುರಾಯಬಾಗತಾಲೂಕಿನಕುಡಚಿ, ಚಿಂಚಲಿ, ಸುಟ್ಟಟ್ಟಿ, ಅಲಕನೂರ, ನಿಲಜಿ, ಮೊರಬ, ಬೆಕ್ಕೇರಿ, ರಾಯಬಾಗ, ನಿಡಗುಂದಿ ಮತ್ತುಅಲಗವಾಡಿಗ್ರಾಮ ಪಂಚಾಯತಿಗಳಿಗೆ ತೆರಳಲಿದೆ.

ಅದೇ ರೀತಿಯಾಗಿ ಎರಡನೇ ಮಾರ್ಗದರಥವು ದಿನಾಂಕ: 18/02/2024 ರಂದು ಖಾನಾಪೂರ ತಾಲೂಕಿನ ಕೊಡಚವಾಡ, ಹಿರೇಹಟ್ಟಿಹೊಳಿ, ಪಾರಿಶ್ವಾಡ, ದೇವಲತ್ತಿ, ಲೋಕೋಳ್ಳಿ, ತೋಪಿನಕಟ್ಟಿ, ಗರ್ಲಗುಂಜಿ ಮತ್ತುಇದ್ದಲಹೊಂಡಗ್ರಾಮ ಪಂಚಾಯತಿಗಳ ಮೂಲಕ ಸಂಚರಿಸಿ ದಿನಾಂಕ: 19/02/2024 ರಂದುಖಾನಾಪೂರತಾಲೂಕಿನನಿಟ್ಟೂರ, ಹಲಕರ್ಣಿ, ಖಾನಾಪೂರ, ಬೋರಗಾಂವ, ಕರಂಬಳ, ಚಾಪಗಾಂವ, ಹೆಬ್ಬಾಳ ಮತ್ತು ಕಸಬಾ ನಂದಗಡಗ್ರಾಮ ಪಂಚಾಯತಿಗಳಿಗೆ ತೆರಳಲಿದೆ.

ಸಂವಿಧಾನ ಜಾಗೃತಿ ಜಾಥದಲ್ಲಿ ಅಧಿಕ ಸಂಖ್ಯೆಯಲ್ಲಿಗ್ರಾಮ ಪಂಚಾಯತಿಗಳ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು, ಗ್ರಾಮದ ಮುಖಂಡರು, ವಿವಿಧ ಸಂಘಟನೆಗಳ ಮುಖಂಡರು,ಸ್ವ-ಸಹಾಯ ಸಂಘಗಳು, ಮತ್ತು ಸಾರ್ವಜನಿಕರು ಭಾಗವಹಿಸುವಿಕೆಯಿಂದ"ಸಂವಿಧಾನಜಾಗೃತಿಜಾಥ" ವನ್ನು ಯಶಸ್ವಿಗೊಳಿಸಲಾಯಿತು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089